ಸಂಪುಟ : 11 ಸಂಚಿಕೆ: 113 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 05 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ






Volume : 11 Issue : 113 Pages : 4+2 Price : 3.00 Friday june 05 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಎರಡು ತಿಂಗಳ ಪಡಿತರ ವಿತರಣೆ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜೂನ್–2026 ಮಾಹೆಯಲ್ಲಿ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಮೇ–2026 ಹಾಗೂ ಜೂನ್–2026 ಎರಡೂ ಮಾಹೆಗಳ ಪಡಿತರ ಆಹಾರ ಧಾನ್ಯವನ್ನು ಒಟ್ಟಾಗಿ ವಿತರಿಸಲಾಗುತ್ತಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ ಒಟ್ಟು 365 ನ್ಯಾಯಬೆಲೆ ಅಂಗಡಿಗಳ ಮೂಲಕ ಫಲಾನುಭವಿಗಳಿಗೆ ಉಚಿತ ಪಡಿತರ ಆಹಾರ ಧಾನ್ಯ ವಿತರಣೆ ನಡೆಯಲಿದೆ.

ಅಂತ್ಯೋದಯ ಅನ್ನ ಯೋಜನೆ (ಎಎವೈ) ಪಡಿತರ ಚೀಟಿದಾರರಿಗೆ, ಏಕ ಸದಸ್ಯ, ದ್ವಿ ಸದಸ್ಯ ಹಾಗೂ ತ್ರಿ ಸದಸ್ಯ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ಅದಕ್ಕಿಂತ ಹೆಚ್ಚಿನ ಸದಸ್ಯರಿರುವ ಎಎವೈ ಪಡಿತರ ಚೀಟಿದಾರರಿಗೆ ಕೇಂದ್ರದ ಎನ್‌ಎಫ್‌ಎಸ್‌ಎ ಹಂಚಿಕೆಯ 35 ಕೆಜಿ ಅಕ್ಕಿ ಹೊರತುಪಡಿಸಿ ಹೆಚ್ಚುವರಿಯಾಗಿ 5 ಕೆಜಿ + 5 ಕೆಜಿ ಸೇರಿ ಒಟ್ಟು 10 ಕೆಜಿ ಅಕ್ಕಿ ವಿತರಿಸಲಾಗುತ್ತದೆ.

ಆದ್ಯತಾ (ಬಿಪಿಎಲ್) ಪಡಿತರ ಚೀಟಿ–ದಾರರ ಪ್ರತಿ ಸದಸ್ಯರಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ವರ್ಗದಡಿ 5 ಕೆಜಿ + 5 ಕೆಜಿ ಸೇರಿ ಒಟ್ಟು 10 ಕೆಜಿ ಅಕ್ಕಿ ನೀಡಲಾಗುತ್ತದೆ.

## ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳ ಅಧಿಕೃತ ಮಾಹಿತಿ ಸಂಗ್ರಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ಗದಗ ಜಿಲ್ಲೆ ಸೇರಿದಂತೆ ರಾಜ್ಯ ಹಾಗೂ ಕೇಂದ್ರ ಮಟ್ಟದಲ್ಲಿ ವಿವಿಧ ಕ್ರೀಡೆಗಳಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿ, ಗದಗ ಇಲ್ಲಿ ನಿಗದಿತ ನಮೂನೆಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆಗೆ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಪ್ರಶಸ್ತಿ ಪತ್ರಗಳ ಪ್ರತಿಗಳನ್ನು ಲಗತ್ತಿಸಿ ಜೂನ್ 15ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಹಾಕಿ ತರಬೇತುದಾರ ಮಂಜುನಾಥ್ ಬಾಗಡೆ (ಮೊ: 9036533909) ಹಾಗೂ ಸೈಕ್ಲಿಂಗ್ ತರಬೇತುದಾರ್ತಿ ವಿದ್ಯಾ ಕುಲಕರ್ಣಿ (ಮೊ: 8951936636) ಅವರನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜೂನ್ 7ರಂದು ವಿದ್ಯುಕ್ತ ಚಾಲನೆ– ಪ್ರತಿಭಾ ಪುರಸ್ಕಾರದಿಂದ ಜಾನಪದ ಜಾತ್ರೆಯವರೆಗೆ ವೈವಿಧ್ಯಮಯ ಕಾರ್ಯಕ್ರಮಗಳು**

# ರಜತೋತ್ಸವದ ರಂಗಿನಲ್ಲಿ ಶ್ರೀ ಕಾಳಿದಾಸ ಸಂಸ್ಥೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಮತ್ತು ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಬೆಳಕು ಹಂಚುತ್ತಾ 25 ವರ್ಷದ ಸಾರ್ಥಕ ಪಯಣ ಪೂರೈಸಿರುವ ಗದುಗಿನ ಶ್ರೀ ಕಾಳಿದಾಸ ಶಿಕ್ಷಣ ಸಂಸ್ಥೆ ಇದೀಗ ರಜತ ಮಹೋತ್ಸವದ ಸಂಭ್ರಮಕ್ಕೆ ಕಾಲಿಟ್ಟಿದೆ. 2002ರಲ್ಲಿ ಆರಂಭವಾದ ಸಂಸ್ಥೆ 2027ಕ್ಕೆ 25 ವರ್ಷ ಪೂರೈಸಲಿರುವ ಹಿನ್ನೆಲೆಯಲ್ಲಿ 2026–27ನೇ ಶೈಕ್ಷಣಿಕ ವರ್ಷವನ್ನು "ರಜತೋತ್ಸವ ವರ್ಷ"ವನ್ನಾಗಿ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಜತ ಮಹೋತ್ಸವ ಸಮಿತಿ ಉಸ್ತುವಾರಿ ಡಾ. ಜಿ.ಬಿ. ಪಾಟೀಲ, ಜೂನ್ 7ರಂದು ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಶ್ರೀಗಳ ಅಮೃತ ಹಸ್ತದಿಂದ ರಜತ ಮಹೋತ್ಸವ ಕಾರ್ಯಕ್ರಮಗಳಿಗೆ ವಿದ್ಯುಕ್ತ ಚಾಲನೆ ದೊರೆಯಲಿದೆ ಎಂದು ತಿಳಿಸಿದರು.

ಪ್ರಸ್ತುತ ಸಂಸ್ಥೆಯ ಅಡಿಯಲ್ಲಿ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳು, ಮೆಟ್ರಿಕ್ ಪೂರ್ವ ಮತ್ತು ನಂತರದ ವಸತಿ ನಿಲಯಗಳು, ಮಹಿಳಾ ವಸತಿ ನಿಲಯ ಹಾಗೂ ಐಟಿಐ ಕಾಲೇಜುಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ. ಮುಂದಿನ ದಿನಗಳಲ್ಲಿ ವೈದ್ಯಕೀಯ, ವಿಜ್ಞಾನ–ತಂತ್ರಜ್ಞಾನ, ತಾಂತ್ರಿಕ




ಶಿಕ್ಷಣ ಸಂಸ್ಥೆಗಳು ಹಾಗೂ ಕೇಂದ್ರ ಪಠ್ಯಕ್ರಮದ ಶಾಲಾ–ಕಾಲೇಜುಗಳನ್ನು ಆರಂಭಿಸುವ ಮಹತ್ವಾಕಾಂಕ್ಷಿ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ನಿವೃತ್ತ ನ್ಯಾಯಾಧೀಶರಾದ ಎಸ್.ಜಿ. ಪಲ್ಲೇದ ಮಾತನಾಡಿ, ರಜತೋತ್ಸವದ ಅಂಗವಾಗಿ ಸಂಸ್ಥೆಯ ಸಾಕ್ಷ್ಯಚಿತ್ರದ ವಿಡಿಯೋ ಕ್ಲಿಪ್ ಬಿಡುಗಡೆಗೊಳ್ಳಲಿದ್ದು, ನೂತನ ಕಟ್ಟಡದ ಆವರಣದಲ್ಲಿ 25 ಸಸಿಗಳನ್ನು ನೆಟ್ಟು ಪರಿಸರ ಜಾಗೃತಿ ಮೂಡಿಸಲಾಗುವುದು ಎಂದರು.

ಬಳಿಕ ಬಯಲು ಆಂಜನೇಯ ದೇವಸ್ಥಾನದ ಆವರಣದ ವೇದಿಕೆಯಲ್ಲಿ ಅಭಿನವ ಗವಿಸಿದ್ದೇಶ್ವರ ಶ್ರೀಗಳು ಭಕ್ತ ಸಾಗರವನ್ನು ಉದ್ದೇಶಿಸಿ ಆಶೀರ್ವಚನ ನೀಡಲಿದ್ದಾರೆ ಎಂದು ತಿಳಿಸಿದರು.

ರಜತೋತ್ಸವ ಕಾರ್ಯಕ್ರಮದಲ್ಲಿ ಸದ್ಭಾವನಾ ಪ್ರಶಸ್ತಿ ಪುರಸ್ಕೃತ ಹಿರಿಯ ಸಂತ–ರಾಜಕಾರಣಿ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ, ರಾಜ್ಯ ವಿದ್ಯುತ್ ನಿಗಮದ ನಿರ್ದೇಶಕ ಹಾಗೂ ಅಭಿಯಂತರರ ಸಂಘದ ಅಧ್ಯಕ್ಷ ಸಿ. ಬಸವಣ್ಣ ಮತ್ತು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಎರಡನೇ ಅವಧಿಗೆ ಆಯ್ಕೆಯಾದ ಚಂದ್ರಶೇಖರ ನುಗ್ಗಲಿ ಅವರನ್ನು ಸನ್ಮಾನಿಸಲಾಗುವುದು.

ರಜತೋತ್ಸವದ ಅಂಗವಾಗಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ 90 ಶೇಕಡಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.

ಇದಲ್ಲದೆ ಆರೋಗ್ಯ ಶಿಬಿರ, ರಕ್ತದಾನ ಶಿಬಿರ, ಯುವಜನರಿಗೆ ದೇಶಿ ಕ್ರೀಡೋತ್ಸವ, ಮಹಿಳಾ ಸಬಲೀಕರಣ ಕಾರ್ಯಕ್ರಮಗಳು, ಸಾಂಸ್ಕೃತಿಕ ಸ್ಪರ್ಧೆಗಳು, ಕಾನೂನು ಅರಿವು, ಅಪರಾಧ ತಡೆ ಜಾಗೃತಿ ಕಾರ್ಯಕ್ರಮಗಳು,

> "ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಸಂಸ್ಥೆಯ ಮಹದಾಸೆ; ಶಿಕ್ಷಣದ ಜೊತೆಗೆ ಸಮಾಜಮುಖಿ ಮೌಲ್ಯಗಳನ್ನೂ ಬೆಳೆಸುವುದು ನಮ್ಮ ಗುರಿ"
> – **ಡಾ. ಜಿ.ಬಿ. ಪಾಟೀಲ,** ರಜತ ಮಹೋತ್ಸವ ಸಮಿತಿ ಉಸ್ತುವಾರಿ

ಸಾವಯವ ಕೃಷಿ ತರಬೇತಿ, ಉದ್ಯೋಗ ಮೇಳ, ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಮಾಹಿತಿ ಶಿಬಿರಗಳನ್ನು ಆಯೋಜಿಸಲು ಯೋಜಿಸಲಾಗಿದೆ.

ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಜಾನಪದ ಜಾತ್ರೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ರಜ–ತ ಮಹೋತ್ಸವ ಸಮಾರೋಪ ಸಮಾರಂಭದಲ್ಲಿ ವರ್ಷಪೂರ್ತಿ ನಡೆದ ಎಲ್ಲಾ ಚಟುವಟಿಕೆಗಳನ್ನು ಒಳಗೊಂಡ ಸ್ಮರಣ ಸಂಚಿಕೆ ಬಿಡುಗಡೆಗೊಳ್ಳಲಿದೆ.

ಪತ್ರಿಕಾಗೋಷ್ಠಿಯಲ್ಲಿ ಬಿ.ಬಿ. ಭಾವಿಕಟ್ಟಿ, ಫಕೀರಪ್ಪ ಹೆಬಸೂರ, ಆರ್.ಡಿ. ಕಡ್ಲಿಕೊಪ್ಪ, ನೀಲಕಂಠ ಮರಡಿ, ವೈ.ಬಿ. ಭಾನಾಪೂರ, ಆರ್.ಎಂ. ನಿಂಬನಾಯ್ಕ, ಎಸ್.ಡಿ. ಸಿಂಗಟಾಲಕೇರಿ, ಎಸ್.ಎಸ್. ಕರಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಆಯುರ್ವೇದ, ಪಾರಂಪರಿಕ ಚಿಕಿತ್ಸೆಗೆ ಹೊಸ ಆಯಾಮ– ಕೇಂದ್ರ ಸಚಿವರು–ಗಣ್ಯರ ಸಮ್ಮುಖದಲ್ಲಿ ಲೋಕಾರ್ಪಣೆ**

# ಜೂ.7ರಂದು ಬಿವಿಜಿ ಚಿಕಿತ್ಸಾ ಕೇಂದ್ರಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಅತಿದೊಡ್ಡ ಸಮಗ್ರ ಸೇವಾ ಹಾಗೂ ಸೌಲಭ್ಯ ನಿರ್ವಹಣಾ ಸಂಸ್ಥೆಗಳಲ್ಲಿ ಒಂದಾದ ಭಾರತ ವಿಕಾಸ್ ಗ್ರೂಪ್ (ಬಿವಿಜಿ) ಇದೀಗ ಗದಗ ಜಿಲ್ಲೆಯಲ್ಲಿ ತನ್ನ ಪ್ರಪ್ರಥಮ ಚಿಕಿತ್ಸಾ ಕೇಂದ್ರ ಆರಂಭಿಸುತ್ತಿದ್ದು, ಜೂನ್ 7ರಂದು ನರಗುಂದ ತಾಲೂಕಿನ ವಾಸನ ಗ್ರಾಮದ ಸ್ವಯಂ ಸಂಜೀವಿನಿ ಆಶ್ರಮದಲ್ಲಿ ಬಿವಿಜಿ ಚಿಕಿತ್ಸಾ ಕೇಂದ್ರ ಲೋಕಾರ್ಪಣೆಗೊಳ್ಳಲಿದೆ ಎಂದು ಬಿವಿಜಿ ಲೈಫ್ ಸೈನ್ಸ್ ಸಂಯೋಜಕ ಸಂಜಯ ಡೋಂಗರೆ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2002ರಲ್ಲಿ ಸ್ಥಾಪನೆಯಾದ ಬಿವಿಜಿ ಸಂಸ್ಥೆ ಇಂದು ದೇಶದಾದ್ಯಂತ ಉದ್ಯೋಗ ಸೃಷ್ಟಿ, ಗುಣಮಟ್ಟದ ಸೇವೆ, ಆರೋಗ್ಯ, ಕೃಷಿ ಹಾಗೂ ಸಾಮಾಜಿಕ ಅಭಿವೃದ್ಧಿ ಕ್ಷೇತ್ರಗಳಲ್ಲಿ ಮಹತ್ವದ ಪಾತ್ರವಹಿಸಿದೆ ಎಂದರು.

ಸಂಸ್ಥೆಯ ಸ್ಥಾಪಕ ಹಾಗೂ ವ್ಯವಸ್ಥಾಪಕ ನಿರ್ದೇಶಕ ಹನುಮಂತರಾವ್ ಗಾಯ್ಕವಾಡ ಅವರು ಕೇವಲ 19ನೇ ವಯಸ್ಸಿನಲ್ಲಿ ಗ್ರಾಮೀಣ ಯುವಕರ ಸಬಲೀಕರಣಕ್ಕಾಗಿ "ಭಾರತ ವಿಕಾಸ್ ಪ್ರತಿಷ್ಠಾನ" ಆರಂಭಿಸಿದ್ದರು.




1997ರಲ್ಲಿ ಕೇವಲ 8 ಉದ್ಯೋಗಿಗಳು ಮತ್ತು ಒಂದು ಹೌಸ್‌ಕೀಪಿಂಗ್ ಒಪ್ಪಂದದೊಂದಿಗೆ ಆರಂಭವಾದ ಸಂಸ್ಥೆ ಇಂದು ದೇಶದ 20ಕ್ಕೂ ಹೆಚ್ಚು ರಾಜ್ಯಗಳ 70ಕ್ಕೂ ಹೆಚ್ಚು ನಗರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, 1 ಲಕ್ಷಕ್ಕೂ ಅಧಿಕ ಸಿಬ್ಬಂದಿಯನ್ನು ಹೊಂದಿದೆ ಎಂದು ಹೇಳಿದರು.

ಬಿವಿಜಿ ಸಂಸ್ಥೆ ಜೀವ ವಿಜ್ಞಾನ ಹಾಗೂ ಆಯುರ್ವೇದ ಕ್ಷೇತ್ರದಲ್ಲೂ ಮಹತ್ವದ ಸಂಶೋಧನೆ ನಡೆಸುತ್ತಿದ್ದು, ಕ್ಯಾನ್ಸರ್, ಲಿವರ್, ಹೃದಯ ರೋಗ, ಸೋರಾಯಸಿಸ್ ಸೇರಿದಂತೆ 200ಕ್ಕೂ ಹೆಚ್ಚು ಔಷಧಿಗಳನ್ನು ಉತ್ಪಾದಿಸಿ ಮಾರುಕಟ್ಟೆಗೆ ಬಿಡುಗಡೆ ಮಾಡಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಮೊದಲ ಬಾರಿಗೆ ಪಾರಂಪರಿಕ ವೈದ್ಯ ಹನುಮಂತ ಮಳಲಿ ಅವರೊಂದಿಗೆ ಒಡಂಬಡಿಕೆ ಮಾಡಿಕೊಂಡು ಗದಗ ಜಿಲ್ಲೆಯ ನರಗುಂದ ತಾಲೂಕಿನ ವಾಸನ ಗ್ರಾಮದ ಸ್ವಯಂ ಸಂಜೀವಿನಿ ಆಶ್ರಮದಲ್ಲಿ ಚಿಕಿತ್ಸಾ ಕೇಂದ್ರ ಆರಂಭಿಸಲಾಗುತ್ತಿದೆ ಎಂದರು.

ಜೂನ್ 7ರಂದು ಬೆಳಿಗ್ಗೆ 11 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹಾಗೂ ಕೇರಳದ ದಿವ್ಯಶ್ರೀ

> "ಪಾರಂಪರಿಕ ವೈದ್ಯಕೀಯ ಮತ್ತು ಆಧುನಿಕ ಆಯುರ್ವೇದ ಸಂಶೋಧನೆಯನ್ನು ಒಟ್ಟುಗೂಡಿಸುವ ಮಹತ್ವದ ಪ್ರಯತ್ನವೇ ಬಿವಿಜಿ ಚಿಕಿತ್ಸಾ ಕೇಂದ್ರ"
> – **ಸಂಜಯ ಡೋಂಗರೆ,** ಬಿವಿಜಿ ಲೈಫ್ ಸೈನ್ಸ್ ಸಂಯೋಜಕರು

ಸಹಸ್ರಾರಯೋಗೀಶ್ವರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಸಂಜೀವಕುಮಾರ ಹಂಚಾಟೆ, ಶಾಸಕರಾದ ಎಚ್.ಕೆ. ಪಾಟೀಲ, ಸಿ.ಸಿ. ಪಾಟೀಲ, ನಿವೃತ್ತ ಡಿಜಿಪಿ ಶಂಕರ ಬಿದರಿ, ಮಾಜಿ ಶಾಸಕ ಬಿ.ಆರ್. ಯಾವಗಲ್, ಬಿವಿಜಿ ಸಂಸ್ಥಾಪಕ ಹನುಮಂತರಾವ್ ಗಾಯ್ಕವಾಡ ಹಾಗೂ ಪಾರಂಪರಿಕ ವೈದ್ಯ ಹನುಮಂತ ಮಳಲಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಪಾರಂಪರಿಕ ವೈದ್ಯ ಹನುಮಂತ ಮಳಲಿ, ಡಾ. ರವಿಕುಮಾರ ಹಾಗೂ ಡಾ. ವಿದ್ಯಾ ಉಪಸ್ಥಿತರಿದ್ದರು.

**ಎರಡನೇ ಹಂತದ ಸಂಪುಟ ವಿಸ್ತರಣೆಯಲ್ಲಿ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಲು ಒತ್ತಾಯ**

# ಉತ್ತರ ಕರ್ನಾಟಕಕ್ಕೆ ಸಚಿವ ಸ್ಥಾನದಲ್ಲಿ ಪ್ರಾತಿನಿಧ್ಯ ಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದ ಎರಡನೇ ಹಂತದ ಸಂಪುಟ ವಿಸ್ತರಣೆಯಲ್ಲಿ ರೋಣ ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಯುವ ಮುಖಂಡ ಹಾಗೂ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಆಗ್ರಹಿಸಿದ್ದಾರೆ.

ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸಿದ್ದು, ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳನ್ನು ವಿಧಾನಸಭೆಯಲ್ಲಿ ಪರಿಣಾಮಕಾರಿ



ಯಾಗಿ ಪ್ರಸ್ತಾಪಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿರುವ ಯಲ್ಲಪ್ಪ ಬಾಬರಿ, "ಕ್ಷೇತ್ರದ ಜನರ ಆಶೋತ್ತರಗಳಿಗೆ ಸದಾ ಸ್ಪಂದಿಸುವ ನಾಯಕ ಜಿ.ಎಸ್. ಪಾಟೀಲರು. ಅವರ ಅನುಭವ ಮತ್ತು ಬದ್ಧತೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡಿದರೆ ಉತ್ತರ ಕರ್ನಾಟಕ ಭಾಗಕ್ಕೆ ನ್ಯಾಯ ಸಿಗುತ್ತದೆ" ಎಂದು ಹೇಳಿದ್ದಾರೆ.

ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ದೊರೆತರೆ ರೋಣ ಕ್ಷೇತ್ರ ಮಾತ್ರವಲ್ಲದೆ ಇಡೀ ಗದಗ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದೆ ಎಂಬ ಅಭಿಪ್ರಾಯ ಕಾರ್ಯಕರ್ತರಲ್ಲಿ ವ್ಯಕ್ತವಾಗಿದೆ.

ನೀರಾವರಿ, ಕೃಷಿ, ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಜಿ.ಎಸ್. ಪಾಟೀಲರು ವಿಶೇಷ ಕಾಳಜಿ ಹೊಂದಿದ್ದು, ಅವರ ನೇತೃತ್ವದಿಂದ ಜಿಲ್ಲೆಗೆ ಹೆಚ್ಚಿನ ಯೋಜನೆಗಳು ಸಿಗುವ ವಿಶ್ವಾಸವಿದೆ ಎಂದು ಕಾರ್ಯಕರ್ತರು ತಿಳಿಸಿದ್ದಾರೆ.

**ಹೊಸ ಟೆಂಡರ್ ಕರೆದು ಪಾರದರ್ಶಕತೆ ತೋರಿಸಿ–ಇಲ್ಲದಿದ್ದರೆ ಜೂನ್ 9ರಿಂದ ಅಹೋರಾತ್ರಿ ಧರಣಿ ಎಚ್ಚರಿಕೆ**

# ಪುರಸಭೆ ಮಳಿಗೆ ಟೆಂಡರ್ ವಿಳಂಬಕ್ಕೆ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುರಸಭೆ ವ್ಯಾಪ್ತಿಯ ಹೊಸ ಬಸ್ ನಿಲ್ದಾಣದ ಎದುರಿನ ವಾಣಿಜ್ಯ ಮಳಿಗೆಗಳ ಗುತ್ತಿಗೆ ಅವಧಿ ಮೂರು ವರ್ಷಗಳ ಹಿಂದೆಯೇ ಮುಕ್ತಾಯಗೊಂಡಿದ್ದರೂ ಹೊಸ ಟೆಂಡರ್ ಪ್ರಕ್ರಿಯೆ ಆರಂಭಿಸದಿರುವುದನ್ನು ಖಂಡಿಸಿ ಜಯ ಕರ್ನಾಟಕ ಸಂಘಟನೆ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗ ತೀವ್ರ ಆಕ್ರೋಶ ವ್ಯಕ್ತಪಡಿಸಿವೆ.

ತಕ್ಷಣ ಹೊಸ ಟೆಂಡರ್ ಕರೆಯದಿದ್ದರೆ ಜೂನ್ 9ರಿಂದ ಪುರಸಭೆ ಮಳಿಗೆಗಳ ಎದುರು ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಗುವುದು ಎಂದು ಜಯ ಕರ್ನಾಟಕ ಸಂಘಟನೆ ಶಿರಹಟ್ಟಿ–ಲಕ್ಷ್ಮೇಶ್ವರ ತಾಲೂಕು ಉಸ್ತುವಾರಿ ರಮೇಶ್ ಹಂಗನಕಟ್ಟಿ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ಜಿಲ್ಲಾ ಅಧ್ಯಕ್ಷ ಬಸವರಾಜ ಹಿರೇಮನಿ ಎಚ್ಚರಿಕೆ



ನೀಡಿದರು.

ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಹೊಸ ಬಸ್ ನಿಲ್ದಾಣದ ಎದುರಿನ 19 ವಾಣಿಜ್ಯ ಮಳಿಗೆಗಳ ಗುತ್ತಿಗೆ ಅವಧಿ 30–03–2023ರಂದು ಅಂತ್ಯಗೊಂಡಿದೆ. ಈ ಕುರಿತು ಈ ಹಿಂದೆಯೇ ಮನವಿ ಸಲ್ಲಿಸಲಾಗಿತ್ತು. ಅಂದಿನ ಮುಖ್ಯಾಧಿಕಾರಿಗಳು 15 ದಿನಗಳಲ್ಲಿ ಕ್ರಮ ಕೈಗೊಳ್ಳುವುದಾಗಿ

> "ಪುರಸಭೆ ಮಳಿಗೆಗಳನ್ನು ಸುಪರ್ದಿಗೆ ಪಡೆದು ಹೊಸ ಟೆಂಡರ್ ಕರೆಯುವವರೆಗೆ ಹೋರಾಟ ಮುಂದುವರಿಯಲಿದೆ"
> – **ಬಸವರಾಜ ಹಿರೇಮನಿ, ಜಿಲ್ಲಾ ಅಧ್ಯಕ್ಷರು**

ಭರವಸೆ ನೀಡಿದ್ದರೂ, ಮೂರು ತಿಂಗಳು ಕಳೆದರೂ ಯಾವುದೇ ಕ್ರಮ ಜರುಗಿಲ್ಲ ಎಂದು ಆರೋಪಿಸಿದರು.

ಕೇವಲ ಅರ್ಜಿ ಸ್ವೀಕರಿಸಿರುವುದಾಗಿ ಹೇಳುವುದನ್ನು ಬಿಟ್ಟು ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳು ಮುಂದಾಗಿಲ್ಲ. ಹೊಸ ಟೆಂಡರ್ ಕರೆಯದೆ ವಿಳಂಬ ಮಾಡುತ್ತಿರುವುದು ಸಾರ್ವಜನಿಕರಲ್ಲಿ ಅನುಮಾನ ಹುಟ್ಟಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

2023ರಿಂದ 2026ರ ವರೆಗೆ ಪುರಸಭೆಯಲ್ಲಿ ಕಾರ್ಯ ನಿರ್ವಹಿಸಿದ ಮುಖ್ಯಾಧಿಕಾರಿಗಳ ಪಾತ್ರವನ್ನು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆಗಳು ಆಗ್ರಹಿಸಿವೆ.

ಜೂನ್ 9ರಿಂದ ಪುರಸಭೆ ಮಳಿಗೆಗಳ ಎದುರು ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಗುವುದು ಎಂದು ಸಂಘಟನೆಗಳು ಎಚ್ಚರಿಸಿವೆ.

ಬಳಿಕ ತಹಸೀಲ್ದಾರ ಧನಂಜಯ ಎಂ. ಹಾಗೂ ಪಿಎಸ್‌ಐ ನಾಗರಾಜ ಗಡದ ಅವರಿಗೆ ಸಹ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭರಮಣ್ಣ ಶೇರಸೂರಿ, ಸುರೇಶ್ ಹಟ್ಟಿ, ಬಸಣ್ಣ ಮೆಲ್ಮುರಿ, ಮಂಜುನಾಥ ಮುಳಗುಂದ, ಮಹಾಂತೇಶ ಗುದ್ನಾಳ, ಮಹೇಶ್ ಸೂರಣಗಿ, ಸಂಜೀವ ಶೇರಸೂರಿ, ಮೈಲಾರಪ್ಪ ಹೆಗ್ಗಣವರ ಸೇರಿದಂತೆ ಎರಡೂ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕಾಂಗ್ರೆಸ್‌ನಲ್ಲಿ ಕುರ್ಚಿ ಫೈಟ್: ವಿಜಯಕುಮಾರ ಗಡ್ಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೇ ಮುಖ್ಯಮಂತ್ರಿ ಕುರ್ಚಿಗಾಗಿ ಒಳಕಿತ್ತಾಟ ನಡೆಯುತ್ತಿದ್ದು, ರಾಜ್ಯದ ಅಭಿವೃದ್ಧಿಗಿಂತ ಅಧಿಕಾರದ ರಾಜಕಾರಣ-ಕ್ಕೇ ಹೆಚ್ಚು ಮಹತ್ವ ನೀಡಲಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ದಿಮೆದಾರ ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, "ಇಷ್ಟು ದಿನ ಕಾಂಗ್ರೆಸ್ ನಾಯಕರು ರಾಜ್ಯದ ಅಭಿವೃದ್ಧಿಯ ಬಗ್ಗೆ ಯೋಚಿಸದೇ ಕುರ್ಚಿ ಕಾದಾಟದಲ್ಲೇ ಕಾಲ ಕಳೆಯುತ್ತಿದ್ದಾರೆ. ಇದೀಗ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಂಪುಟ ರಚನೆ ವಿಷಯದಲ್ಲೂ 'ನಾ ಮೇಲುತಾ ಮೇಲು' ಎಂಬ ರಾಜಕೀಯವೇ ನಡೆಯುತ್ತಿದೆ. ಜನರ ಸಮಸ್ಯೆಗಳ ಬಗ್ಗೆ ಯಾರಿಗೂ ಕಾಳಜಿ ಇಲ್ಲ" ಎಂದು ಟೀಕಿಸಿದರು.

"ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಗಳನ್ನೇ ಸಾಧನೆ ಎಂದು ಬಿಂಬಿಸಿದರು. ಆದರೆ ಅವುಗಳ ಜಾರಿಗೆ ರಾಜ್ಯದ ಜನರ ಮೇಲೆ ಸಾಲದ ಹೊರೆ ಹಾಕಿದರು. ರಾಜ್ಯದ ಮೇಲೆ ₹7.4 ಲಕ್ಷ ಕೋಟಿ ಸಾಲ ಬಿಟ್ಟು ಹೋಗಿರುವುದು ವಿಪರ್ಯಾಸ" ಎಂದು ಆರೋಪಿಸಿದರು.

"ಈ ಬಾರಿಯ ಬಜೆಟ್‌ನಲ್ಲಿ ₹94 ಸಾವಿರ ಕೋಟಿಗೂ ಅಧಿಕ ಹಣದ ಕೊರತೆಯಿದೆ. ಜೊತೆಗೆ ಪ್ರತಿವರ್ಷ ₹38 ಸಾವಿರ ಕೋಟಿ ಬಡ್ಡಿ ಪಾವತಿಸಬೇಕಾಗಿದೆ. ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದ್ದು, ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾರ್ಯಗಳು ಶೂನ್ಯವಾಗಿವೆ" ಎಂದು ದೂರಿದರು.

"ಮುಂದಿನ ದಿನಗಳಲ್ಲಿ ರಾಜ್ಯದ ಜನರು ಇನ್ನಷ್ಟು ತೆರಿಗೆಗಳಿಗೆ ಸಿದ್ಧರಾಗಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದೆ" ಎಂದು ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

## ಜೂ.10ರಂದು ಲೋಕಾಯುಕ್ತ ಜನಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳಿಂದ ಜೂನ್ 10ರಂದು ಲೋಕಾಯುಕ್ತ ಜನಸಂಪರ್ಕ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಆಯೋಜಿಸಲಾಗಿದೆ. ಜೂನ್ 10ರ ಬುಧವಾರ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಗದಗದ ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಅಂದು ಸಾರ್ವಜನಿಕರಿಂದ ದೂರು ಹಾಗೂ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜೂನ್ 05 – ವಿಶ್ವ ಪರಿಸರ ದಿನದ ನಿಮಿತ್ತ ಈ ವಿಶೇಷ ಲೇಖನ**

# "ಭೂಮಿ ನಿನ್ನದು-ಅದನ್ನು ಉಳಿಸು ಮನವೇ"

"ಪ್ರಕೃತಿ ಪ್ರತಿಯೊಬ್ಬ ಮನುಷ್ಯನ ಅಗತ್ಯಗಳನ್ನು ಪೂರೈಸುತ್ತದೆ, ಆದರೆ ಆತನ ದುರಾಸೆಯನ್ನು ಅಲ್ಲ" ಎಂಬ ಮಹಾತ್ಮ ಗಾಂಧೀಜಿಯವರ ಮಾತು ಇಂದಿನ ಪರಿಸ್ಥಿತಿಯಲ್ಲಿ ಅಕ್ಷರಶಃ ಸತ್ಯವಾಗುತ್ತಿದೆ. ಅದೇ ರೀತಿ ಖಲೀಲ್ ಗಿಬ್ರಾನ್ ಅವರು "ಭೂಮಿಯು ಸುಂದರವಾದ ವಧುವಿನಂತೆ, ಅವಳ ಸೌಂದರ್ಯ ಹೆಚ್ಚಿಸಲು ಮಾನವ ನಿರ್ಮಿತ ಆಭರಣಗಳ ಅಗತ್ಯವಿಲ್ಲ" ಎಂದು ಹೇಳಿರುವುದು ಪರಿಸರದ ಮಹತ್ವವನ್ನು ಸಾರುತ್ತದೆ.

ಇಡೀ ವಿಶ್ವದ ಅತ್ಯಂತ ಅದ್ಭುತ ಗ್ರಹ ನಮ್ಮ ಭೂಮಿ. ಈ ಭೂಮಿಯನ್ನು ನಮ್ಮ ಹಿರಿಯರು ನಮಗೆ ಕೊಟ್ಟ ಅಮೂಲ್ಯ ಪರಂಪರೆಯಾಗಿ ಉಳಿಸಿದ್ದಾರೆ. ಅದೇ ರೀತಿಯಲ್ಲಿ ನಾವು ಸಹ ಮುಂದಿನ ಪೀಳಿಗೆಗಾಗಿ ಪ್ರಕೃತಿಯನ್ನು ಸಂರಕ್ಷಿಸಿ ಉಳಿಸುವ ಜವಾಬ್ದಾರಿ ಹೊಂದಿದ್ದೇವೆ.

ಪ್ರತಿ ವರ್ಷ ಜೂನ್ 05ರಂದು ವಿಶ್ವಾದ್ಯಂತ "ವಿಶ್ವ ಪರಿಸರ ದಿನ"ವನ್ನು ಆಚರಿಸಲಾಗುತ್ತದೆ. ಪರಿಸರದ ಮಹತ್ವ, ಅದರ ಸಂರಕ್ಷಣೆ ಹಾಗೂ ಆರೋಗ್ಯಕರ ಬದುಕಿಗೆ ಅಗತ್ಯವಾದ ಗಾಳಿ, ನೀರು, ಮಣ್ಣು ಮತ್ತು ಗಿಡ-ಮರಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ.

ಇಂದು ಎಲ್ಲೆಡೆ ಬಿಸಿಲಿನ ತಾಪ ಹೆಚ್ಚಾಗಿದೆ. ರಾತ್ರಿ ವೇಳೆಯಲ್ಲಿಯೂ ತಂಪಿನ ಅನುಭವವೇ ಇಲ್ಲದಂತಾಗಿದೆ. ಮಳೆಯ ಕೊರತೆ, ಬರದ ಆತಂಕ ಹಾಗೂ ದಿನದಿಂದ ದಿನಕ್ಕೆ ಏರುತ್ತಿರುವ ಉಷ್ಣಾಂಶ ಜನಜೀವನವನ್ನು ಸಂಕಷ್ಟಕ್ಕೆ ತಳ್ಳಿದೆ. ಮನುಷ್ಯ ಮಾತ್ರವಲ್ಲದೆ ಸಕಲ




ಜೀವರಾಶಿಗಳೂ ಮಳೆಗಾಗಿ ಕಾತರದಿಂದ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಒಂದೆಡೆ ಬರ, ಮತ್ತೊಂದೆಡೆ ಬಿಸಿಲಿನ ಬೇಗೆ-ಈ ಎರಡರ ನಡುವೆ ಬದುಕು ಬಸವಳಿದಂತಾಗಿದೆ.

ಈ ಸಂದರ್ಭದಲ್ಲಿ "ನಮಗೆ ಇರುವುದೊಂದೇ ಭೂಮಿ; ಅದರ ರಕ್ಷಣೆಯು ನಮ್ಮೆಲ್ಲರ ಹೊಣೆಗಾರಿಕೆ" ಎಂಬ ಸಂದೇಶ ಪ್ರತಿಯೊಬ್ಬರ ಮನಸ್ಸಿನಲ್ಲಿ ಮೂಡಬೇಕಾಗಿದೆ.

1972ರಲ್ಲಿ ಸ್ಟಾಕ್‌ಹೋಮ್‌ನಲ್ಲಿ ನಡೆದ ಮಾನವ ಪರಿಸರ ಸಮ್ಮೇಳನದ ಮೊದಲ ದಿನ ವಿಶ್ವಸಂಸ್ಥೆಯು ವಿಶ್ವ ಪರಿಸರ ದಿನವನ್ನು ಘೋಷಿಸಿತು. ಅದರ ಮುಂದುವರಿದ ಭಾಗವಾಗಿ 1973ರಲ್ಲಿ "ಕೇವಲ ಒಂದು ಭೂಮಿ" ಎಂಬ ಘೋಷಣೆಯೊಂದಿಗೆ ಮೊದಲ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಅಂದಿನಿಂದ ಇಂದಿನವರೆಗೂ ಪರಿಸರ ಸಂರಕ್ಷಣೆಯ ಸಂದೇಶವನ್ನು ವಿಶ್ವದಾದ್ಯಂತ ಸಾರಲಾಗುತ್ತಿದೆ.

ಪ್ರಕೃತಿ ನಮ್ಮ ಬದುಕಿನ ಭಾಗವಲ್ಲ; ನಾವು ಪ್ರಕೃತಿಯ ಒಂದು ಭಾಗವಷ್ಟೇ. ಆದರೆ ಅಭಿವೃದ್ಧಿಯ ಹೆಸರಿನಲ್ಲಿ ಮನುಷ್ಯ ಪರಿಸರದ ಮೇಲೆ ನಿರಂತರ ದಾಳಿ ನಡೆಸುತ್ತಿದ್ದಾನೆ. ಅರಣ್ಯ ನಾಶ, ನದಿಗಳ ಮಾಲಿನ್ಯ, ವಾಹನಗಳ ಹೊಗೆ, ಕೈಗಾರಿಕೆಗಳ ತ್ಯಾಜ್ಯ-ಇವೆಲ್ಲವೂ ಪರಿಸರದ ಸಮತೋಲನವನ್ನು ಹಾಳು ಮಾಡುತ್ತಿವೆ.

ಇದರ ಪರಿಣಾಮ ಈಗಾಗಲೇ ಗೋಚರವಾಗುತ್ತಿದೆ. ವಾಯುಮಾಲಿನ್ಯ, ನೀರಿನ ಕೊರತೆ, ಅತಿವೃಷ್ಟಿ, ಅನಾವೃಷ್ಟಿ, ಆರೋಗ್ಯ ಸಮಸ್ಯೆಗಳು ಹಾಗೂ ಹವಾಮಾನ ವೈಪರೀತ್ಯಗಳು ಜನರನ್ನು ಕಂಗೆಡಿಸುತ್ತಿವೆ. ಮರಗಳು ಕೊಡುವ ಶುದ್ಧ ಆಮ್ಲಜನಕದ ಮಹತ್ವವನ್ನು ಈಗ ಜಗತ್ತು ಅರಿತುಕೊಳ್ಳುತ್ತಿದೆ.

ಆದ್ದರಿಂದ ಪರಿಸರದ ಬಗ್ಗೆ ಹಿಂದಿಗಿಂತಲೂ ಹೆಚ್ಚು ಕಾಳಜಿ ವಹಿಸಬೇಕಾಗಿದೆ. ಪುನರ್ಬಳಕೆ ಸಾಧ್ಯವಿಲ್ಲದ ವಸ್ತುಗಳ ಬಳಕೆಯನ್ನು ಕಡಿಮೆ ಮಾಡಬೇಕು. ವಿಶೇಷವಾಗಿ ಪ್ಲಾಸ್ಟಿಕ್ ಬಳಕೆ ನಿಯಂತ್ರಣಕ್ಕೆ ಬರಬೇಕಾಗಿದೆ.

ಪರಿಸರಕ್ಕೆ ಅತಿಹೆಚ್ಚು ಹಾನಿಯಾಗುತ್ತಿರುವುದು ಮನುಷ್ಯನಿಂದಲೇ. ಆದ್ದರಿಂದ ಪರಿಸರ ರಕ್ಷಣೆ-ಯ ಜವಾಬ್ದಾರಿಯೂ ಮನುಷ್ಯನ ಮೇಲಿದೆ. ಪರಿಸರ ಉಳಿಸಲು ದೊಡ್ಡ ದೊಡ್ಡ ಯೋಜನೆಗಳ ಅಗತ್ಯವಿಲ್ಲ; ಪ್ರತಿಯೊಬ್ಬರೂ ಒಂದೊಂದು ಗಿಡ ನೆಟ್ಟು ಬೆಳೆಸಿದರೂ ಸಾಕು.

ಪ್ಲಾಸ್ಟಿಕ್ ತ್ಯಾಜ್ಯ, ರಾಸಾಯನಿಕ ತ್ಯಾಜ್ಯ ಹಾಗೂ ಅನಗತ್ಯ ವಸ್ತುಗಳು ಭೂಮಿಗೆ ದೊಡ್ಡ ಅಪಾಯವಾಗಿವೆ. ಸರ್ಕಾರ ಮಾತ್ರವಲ್ಲದೆ ಸಾರ್ವಜನಿಕರೂ ಪರಿಸರ ಸಂರಕ್ಷಣೆಯಲ್ಲಿ ಕೈಜೋಡಿಸಬೇಕಾಗಿದೆ. ನದಿಗಳಿಗೆ ತ್ಯಾಜ್ಯ ಸೇರುವುದನ್ನು ತಡೆಯಬೇಕು. ವಾಯುಮಾಲಿನ್ಯ ಕಡಿಮೆ ಮಾಡುವತ್ತ ಕ್ರಮ ಕೈಗೊಳ್ಳಬೇಕು. ಗಿಡ-ಮರಗಳು ಹೆಚ್ಚಾದರೆ ಗಾಳಿ ಶುದ್ಧವಾಗುತ್ತದೆ.

ಪರಿಸರ ವ್ಯವಸ್ಥೆಯನ್ನು ಅದರ ಸಹಜ ಸೌಂದರ್ಯದೊಂದಿಗೆ ಉಳಿಸುವುದು ನಮ್ಮೆಲ್ಲರ ಸಾಮೂಹಿಕ ಕರ್ತವ್ಯವಾಗಿದೆ. ಮನೆ, ಶಾಲೆ, ಕಚೇರಿ, ವ್ಯಾಪಾರ ಕೇಂದ್ರ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಗಿಡಗಳನ್ನು ನೆಟ್ಟು ಬೆಳೆಸುವ ಮೂಲಕ ಹಸಿರು ವಾತಾವರಣ ನಿರ್ಮಿಸಬೇಕು.

"ಮನೆಗೊಂದು ಮರ, ಮನಸ್ಸಿಗೊಂದು ನೆಮ್ಮದಿ" ಎಂಬ ಮನೋಭಾವ ಬೆಳೆಸಿಕೊಳ್ಳಬೇಕು. ಹಸಿರನ್ನೇ ಉಸಿರಾಡಿ, ಹಸಿರಿನೊಂದಿಗೆ ಬದುಕಿ, ಮುಂದಿನ ಪೀಳಿಗೆಗೆ ಸುಂದರ ಭೂಮಿಯನ್ನು ಕೊಡುವ ಸಂಕಲ್ಪ ಮಾಡಬೇಕು.

ಪರಿಸರ ಸಮಸ್ಯೆಗಳನ್ನು ನಾವು ಪರಿಹರಿಸಿದರೆ, ನಮ್ಮ ನೂರಾರು ಸಮಸ್ಯೆಗಳು ಪರಿಹಾರವಾದಂತೆ. ಈ ಭೂಮಿಗಿಂತ ಉತ್ತಮವಾದ ಸ್ಥಳ ಮತ್ತೊಂದಿಲ್ಲ. ಆದ್ದರಿಂದ ಶ್ರಮವಾದರೂ ಸರಿಯೇ, ನಮ್ಮ ಭೂಮಿಯನ್ನು ಉಳಿಸೋಣ.

ಒಟ್ಟಿನಲ್ಲಿ ಬಿಸಿಲಿನ ಬೇಗೆ, ಬರ, ಅತಿವೃಷ್ಟಿ ಇವೆಲ್ಲವೂ ಪ್ರಕೃತಿಯ ಎಚ್ಚರಿಕೆಯ ಗಂಟೆಗಳಾಗಿವೆ. ಈಗಲಾದರೂ ಎಚ್ಚೆತ್ತು ಪರಿಸರ ಸ್ನೇಹಿ ಸಮಾಜ ನಿರ್ಮಾಣದತ್ತ ಹೆಜ್ಜೆ ಇಡಬೇಕಾಗಿದೆ. ಏಕೆಂದರೆ ಭೂಮಿ ನಮ್ಮದು ಅಲ್ಲ ಮುಂದಿನ ಪೀಳಿಗೆಯಿಂದ ಪಡೆದ ಸಾಲವಾಗಿದೆ.

ವಂದನೆಗಳೊಂದಿಗೆ



**– ಬಸವರಾಜ ಎಮ್. ಯರಗುಪ್ಪಿ**
ರಾಮಗೇರಿ,
ತಾ: ಲಕ್ಷ್ಮೇಶ್ವರ
ಜಿ: ಗದಗ

**ಮನೆಗೊಂದು ಮರ ಬೆಳೆಸೋಣ-ವಸುಂಧರೆಯನ್ನು ಉಳಿಸೋಣ**

# ವಿಶ್ವ ಪರಿಸರ ದಿನ ಕೇವಲ ಆಚರಣೆಯಾಗದಿರಲಿ....

ಪ್ರತಿ ವರ್ಷ ಜೂನ್ 05 ಬಂದಾಗ ವಿಶ್ವದಾದ್ಯಂತ "ವಿಶ್ವ ಪರಿಸರ ದಿನ"ವನ್ನು ಸಡಗರ, ಸಂಭ್ರಮ ಹಾಗೂ ಜಾಗೃತಿ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುತ್ತದೆ. ಪರಿಸರ ಸಂರಕ್ಷಣೆ ಕುರಿತು ಭಾಷಣಗಳು, ಸಸಿ ನೆಡುವ ಕಾರ್ಯಕ್ರಮಗಳು, ಜಾಥಾಗಳು ಎಲ್ಲೆಡೆ ನಡೆಯುತ್ತವೆ. ಆದರೆ ಪರಿಸರದ ಮೇಲಿನ ಪ್ರೀತಿ ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ವಿಶ್ವ ಪರಿಸರ ದಿನದ ನಿಜವಾದ ಅರ್ಥ, ಒಂದು ದಿನ ಸಸಿ ನೆಡುವುದರಲ್ಲಿ ಅಲ್ಲ; ಆ ಸಸಿಯನ್ನು ಹೆಮ್ಮರವಾಗಿ ಬೆಳೆಸುವ ಬದ್ಧತೆಯಲ್ಲಿ ಅಡಗಿದೆ.

"ಮರ ಕಡಿಯುವ ಮುನ್ನ ಯೋಚಿಸು ನಿನ್ನ ಉಸಿರಿನ ಕೊನೆಯ ಕೊಂಡಿಯನ್ನು ಕತ್ತರಿಸುತ್ತಿರುವೆ ಎಂದು. ಸಸಿ ನೆಡುವ ಮುನ್ನ ಹರುಷಪಡು ಮುಂದಿನ ಪೀಳಿಗೆಗೆ ಜೀವ ನೀಡುತ್ತಿರುವೆ ಎಂದು" ಎಂಬ ಮಾತು ಇಂದಿನ ಪರಿಸ್ಥಿತಿಯಲ್ಲಿ ತುಂಬಾ ಅರ್ಥಪೂರ್ಣವಾಗಿದೆ.

ಇಂದು ಅಭಿವೃದ್ಧಿಯ ಹೆಸರಿನಲ್ಲಿ ಹಳ್ಳಿಗಳಾಗಲಿ, ನಗರಗಳಾಗಲಿ ಎಲ್ಲೆಡೆ ಮರಗಳನ್ನು ಕಡಿದು ಕಟ್ಟಡಗಳು, ಹೆದ್ದಾರಿಗಳು, ಕೈಗಾರಿಕೆಗಳು, ವಿದ್ಯುತ್ ಮಾರ್ಗಗಳು ಹಾಗೂ ವಿವಿಧ ಯೋಜನೆಗಳನ್ನು ನಿರ್ಮಿಸಲಾಗುತ್ತಿದೆ. ಇದರ ಪರಿಣಾಮವಾಗಿ ಬೇಸಿಗೆಯ ಬಿಸಿಲು ವರ್ಷದಿಂದ ವರ್ಷಕ್ಕೆ ತೀವ್ರವಾಗುತ್ತಿದೆ. ಅಂತರ್ಜಲ ಮಟ್ಟ ಕುಸಿಯುತ್ತಿದೆ. ಸಕಾಲಕ್ಕೆ ಮಳೆಯಾಗುತ್ತಿಲ್ಲ. ನಾವು ಉಸಿರಾಡುವ ಗಾಳಿ ಕಲುಷಿತವಾಗುತ್ತಿದೆ.

ಹವಾಮಾನ ವೈಪರೀತ್ಯ, ಅತಿವೃಷ್ಟಿ, ಅನಾವೃಷ್ಟಿ, ಉಷ್ಣಾಂಶ ಏರಿಕೆ ಇವೆಲ್ಲವೂ ಪ್ರಕೃತಿಯ ಎಚ್ಚರಿಕೆಯ ಗಂಟೆಗಳಾಗಿವೆ. ಈ ಎಲ್ಲಾ ಸಮಸ್ಯೆಗಳಿಗೆ ಇರುವ ಸರಳ ಹಾಗೂ ಶಾಶ್ವತ ಪರಿಹಾರವೆಂದರೆ ಹೆಚ್ಚು ಹೆಚ್ಚು ಸಸಿಗಳನ್ನು ನೆಟ್ಟು ಬೆಳೆಸುವುದು.

ಪ್ರತಿ ವರ್ಷ ಅರಣ್ಯ ಇಲಾಖೆ ಹಾಗೂ ವಿವಿಧ ಸಂಘ-ಸಂಸ್ಥೆಗಳು ಲಕ್ಷಾಂತರ ಸಸಿಗಳನ್ನು ನೆಡುತ್ತವೆ. ರಸ್ತೆ ಬದಿಗಳು, ಗೋಮಾಳಗಳು, ಸಾರ್ವಜನಿಕ ಸ್ಥಳಗಳು ಹಾಗೂ ನೆಡುತೋಪುಗಳಲ್ಲಿ ಗಿಡಗಳನ್ನು ಬೆಳೆಸುವ ಪ್ರಯತ್ನ ಮಾಡಲಾಗುತ್ತದೆ. ಆದರೆ ಅವುಗಳಲ್ಲಿ ಬಹಳಷ್ಟು ಗಿಡಗಳು ಸಂರಕ್ಷಣೆ ಕೊರತೆಯಿಂದ ಒಣಗಿ ಹೋಗುತ್ತವೆ.




ಇದಕ್ಕೆ ಕೇವಲ ಸರ್ಕಾರ ಅಥವಾ ಅರಣ್ಯ ಇಲಾಖೆಯನ್ನು ದೂಷಿಸುವುದರಿಂದ ಪ್ರಯೋಜನವಿಲ್ಲ. ಪರಿಸರ ರಕ್ಷಣೆಯಲ್ಲಿ ಪ್ರತಿಯೊಬ್ಬ ನಾಗರಿಕನ ಪಾತ್ರ ಅತ್ಯಂತ ಮುಖ್ಯವಾಗಿದೆ. ಸಸಿ ನೆಡುವುದಕ್ಕಿಂತ ಅದನ್ನು ಪೋಷಿಸಿ ಉಳಿಸುವ ಮನೋಭಾವ ಸಮಾಜದಲ್ಲಿ ಬೆಳೆಬೇಕು. ಇತ್ತೀಚಿನ ವರ್ಷಗಳಲ್ಲಿ ಕ್ರೀಡಾ ಕ್ಷೇತ್ರವೂ ಪರಿಸರ ಸಂರಕ್ಷಣೆಯತ್ತ ಮಹತ್ವದ ಹೆಜ್ಜೆ ಇಟ್ಟಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಹಾಗೂ ಟಾಟಾ ಗ್ರೂಪ್ ಕೈಗೊಂಡ "ಗ್ರೀನ್ ಡಾಟ್ ಬಾಲ್" ಪರಿಸರ ಸ್ನೇಹಿ ಅಭಿಯಾನ ಇದಕ್ಕೆ ಉತ್ತಮ ಉದಾಹರಣೆಯಾಗಿದೆ.

2023ರಿಂದ ಐಪಿಎಲ್ ಪಂದ್ಯಗಳಲ್ಲಿ ಪ್ರತಿ "ಡಾಟ್ ಬಾಲ್"ಗೆ ಸಸಿಗಳನ್ನು ನೆಡುವ ಅಭಿಯಾನ ಆರಂಭಿಸಲಾಯಿತು. ಪಂದ್ಯಗಳ ಸ್ಕೋರ್‌ಬೋರ್ಡ್‌ನಲ್ಲಿ ಡಾಟ್ ಚುಕ್ಕೆಯ ಬದಲಿಗೆ ಹಸಿರು ಮರದ ಚಿಹ್ನೆ ಪ್ರದರ್ಶಿಸುವ ಮೂಲಕ ಅಭಿಮಾನಿಗಳಲ್ಲಿ ಪರಿಸರ ಜಾಗೃತಿ ಮೂಡಿಸಲಾಯಿತು.

ಮುಂದೆ ಈ ಯೋಜನೆಯನ್ನು ಮಹಿಳಾ ಪ್ರೀಮಿಯರ್ ಲೀಗ್‌ಗೂ ವಿಸ್ತರಿಸಲಾಯಿತು. 2025ರ ಐಪಿಎಲ್ ಸಂಪೂರ್ಣ ಸೀಸನ್‌ನಲ್ಲಿ ಪ್ರತಿ ಡಾಟ್ ಬಾಲ್‌ಗೆ 18 ಸಸಿಗಳನ್ನು ನೆಡಲಾಗಿದ್ದು, 2026ರ ಆವೃತ್ತಿಯಲ್ಲಿ ಲೀಗ್ ಪಂದ್ಯಗಳಲ್ಲಿ ಪ್ರತಿ ಡಾಟ್ ಬಾಲ್‌ಗೆ 19 ಸಸಿಗಳು ಹಾಗೂ ಪ್ಲೇ-ಆಫ್ ಪಂದ್ಯಗಳಲ್ಲಿ 500 ಸಸಿಗಳನ್ನು ನೆಡುವ ಮಹತ್ವಾಕಾಂಕ್ಷಿ ಯೋಜನೆ ಯಶಸ್ವಿಯಾಗಿ ಮುಂದುವರಿಯುತ್ತಿದೆ.

ಈ ಮೂಲಕ ಕ್ರೀಡೆಯ ಜೊತೆ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ಜೋಡಿಸುವ ಹೊಸ ಸಂಪ್ರದಾಯಕ್ಕೆ ಬಿಸಿಸಿಐ ಹಾಗೂ ಟಾಟಾ ಗ್ರೂಪ್ ನಾಂದಿ ಹಾಡಿವೆ.

ಪರಿಸರ ಕಾಪಾಡುವುದು ಕೇವಲ ಸರ್ಕಾರದ ಅಥವಾ ಸಂಘ-ಸಂಸ್ಥೆಗಳ ಕೆಲಸವಲ್ಲ. ಅದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ನಮ್ಮ ಮನೆ, ಶಾಲೆ, ಕಚೇರಿ, ಹಳ್ಳಿ, ನಗರ ಎಲ್ಲೆಡೆ ಹಸಿರು ವಾತಾವರಣ ನಿರ್ಮಿಸಲು ನಾವು ಕೈಜೋಡಿಸಬೇಕು.

ಈ ಬಾರಿಯ ವಿಶ್ವ ಪರಿಸರ ದಿನದಂದು ಕೇವಲ ಸಸಿ ನೆಡುವ ನಾಟಕ ಮಾಡದೆ, ನೆಟ್ಟ ಸಸಿಯನ್ನು ಹೆಮ್ಮರವಾಗಿ ಬೆಳೆಸುವ ಸಂಕಲ್ಪ ಮಾಡೋಣ. ಮನೆಗೊಂದು ಮರ ಬೆಳೆಸೋಣ. ವಸುಂಧರೆಯನ್ನು ಉಳಿಸೋಣ.

ವಂದನೆಗಳೊಂದಿಗೆ

**–ಪ್ರೊ. ಎಸ್.ಎಸ್. ಗೋದಿ**
ಸಹಪ್ರಾಧ್ಯಾಪಕರು,
ರಾಜೀವ್ ಗಾಂಧಿ ಶಿಕ್ಷಣ ಮಹಾವಿದ್ಯಾಲಯ, ರೋಣ

**ಹಣ ಜಮೆ ವಿಳಂಬಕ್ಕೆ ವಿಮಾ ಕಂಪನಿ ವಿರುದ್ಧ ಕ್ರಿಮಿನಲ್ ಕ್ರಮಕ್ಕೆ ರೈತರ ಆಗ್ರಹ**

## ವಿಮೆ ಹಣ ವಿಳಂಬಕ್ಕೆ ರೈತರು ಗರಂ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

2025-26ನೇ ಸಾಲಿನ ಮುಂಗಾರು ಬೆಳೆ ವಿಮೆ ಹಣ ಇತ್ಯರ್ಥಗೊಂಡಿದ್ದರೂ ರೈತರ ಖಾತೆಗಳಿಗೆ ಇನ್ನೂ ಜಮೆಯಾಗದಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿರುವ ರೈತಸೇನಾ ಮುಖಂಡರು, ಸಂಬಂಧಿಸಿದ ವಿಮಾ ಕಂಪನಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಆಗ್ರಹಿಸಿದ್ದಾರೆ.

ರೈತಸೇನಾ ಅಧ್ಯಕ್ಷ ಶರಣಪ್ಪ ಧರ್ಮಾಯತ ಪ್ರಕಟಣೆ ಮೂಲಕ ಈ ಬೇಡಿಕೆ ಮುಂದಿಟ್ಟಿದ್ದು, "ಬೆಳೆ ವಿಮೆ ಇತ್ಯರ್ಥಗೊಂಡ 45 ದಿನಗಳೊಳಗೆ ರೈತರ ಖಾತೆಗೆ ಹಣ ಜಮೆಯಾಗಬೇಕು ಎಂಬ ನಿಯಮವಿದೆ. ಆದರೆ ವರ್ಷ ಕಳೆಯುತ್ತ ಬಂದರೂ ಹಣ ಜಮೆಯಾಗಿಲ್ಲ. ಇದರಲ್ಲಿ ವಿಮಾ ಕಂಪನಿಯ ಹುನ್ನಾರವಿದೆಯೇ?" ಎಂದು ಪ್ರಶ್ನಿಸಿದ್ದಾರೆ.

ಜಿಲ್ಲಾಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ರೈತರ ಖಾತೆಗಳಿಗೆ ಹಣ ಜಮೆಯಾಗುವಂತೆ ಕ್ರಮ ಕೈಗೊಳ್ಳಬೇಕು. ನಿಯಮ ಉಲ್ಲಂಘಿಸಿದ ವಿಮಾ ಕಂಪನಿ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಮುಂದಿನ ದಿನಗಳಲ್ಲಿ ಆ ಕಂಪನಿಗೆ ವಿಮೆ ಕಾರ್ಯ ನೀಡಬಾರದು ಎಂದು ಒತ್ತಾಯಿಸಿದ್ದಾರೆ.

ರೈತ ಮುಖಂಡ ಆನಂದ ಕೊಟಗಿ ಮಾತನಾಡಿ, "ನರೇಗಲ್ಲ, ಮಾರನಬಸರಿ ಹಾಗೂ ನಿಡಗುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೋವಿನ ಜೋಳ ಬೆಳೆ ವಿಮೆ ಇತ್ಯರ್ಥಗೊಂಡಿದೆ. ಆದರೆ ಕೃಷಿ ಇಲಾಖೆಯನ್ನು ಸಂಪರ್ಕಿಸಿದರೆ ಸ್ಪಷ್ಟ ಮಾಹಿತಿ ನೀಡುತ್ತಿಲ್ಲ" ಎಂದು ಆರೋಪಿಸಿದರು.

ಮುಖಂಡ ಬಾಳಪ್ಪ ಸೋಮಗೊಂಡ ಮಾತನಾಡಿ, "ಮುಂಗಾರು ಬಿತ್ತನೆ ಈಗಾಗಲೇ ಭರದಿಂದ ಸಾಗುತ್ತಿದೆ. ಈ ವಾರದೊಳಗೆ ವಿಮೆ ಹಣ ರೈತರ ಕೈ ಸೇರದಿದ್ದರೆ ಕೃಷಿ ಚಟುವಟಿಕೆಗಳಿಗೆ ದೊಡ್ಡ ತೊಂದರೆಯಾಗಲಿದೆ.

ಸಮಸ್ಯೆ ಮುಂದುವರಿದರೆ ರೈತಸೇನಾ ವತಿಯಿಂದ ಉಗ್ರ ಪ್ರತಿಭಟನೆ ನಡೆಸಲಾಗುವುದು" ಎಂದು ಎಚ್ಚರಿಸಿದರು. ಪ್ರಕಟಣೆಗೆ ಚನ್ನಪ್ಪ ಹೊನವಾಡ, ರುದ್ರೇಶ ಕೊಟಗಿ, ಕಳಕಪ್ಪ ರೋಣದ, ಕಳಕಪ್ಪ ಧರ್ಮಾಯತ ಸೇರಿದಂತೆ ಹಲವರು ಸಹಿ ಹಾಕಿದ್ದಾರೆ.

**ಸಾವಿರಾರು ಗಿಡಗಳ ಸಂರಕ್ಷಣೆ, ಕಪ್ಪತ್ತಗುಡ್ಡ ಉಳಿವಿನ ಹೋರಾಟ, ಪರಿಸರ ಜಾಗೃತಿಯ ಮೂಲಕ ಡಂಬಳದಲ್ಲಿ ಹಸಿರು ಕ್ರಾಂತಿ ಮೂಡಿಸಿದ ಪರಿಸರ ಹೋರಾಟಗಾರ**


# ಮರಗಳೇ ನನ್ನ ಮಠ-ಪರಿಸರಕ್ಕಾಗಿ ಬದುಕನ್ನೇ ಅರ್ಪಿಸಿದ ಗೋಣಿಬಸಪ್ಪ ಕೊರ್ಲಹಳ್ಳಿ

ಜೂನ್ 5ರಂದು ವಿಶ್ವದಾದ್ಯಂತ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಗುತ್ತಿದೆ. ಆಧುನೀಕರಣ, ಜಾಗತೀಕರಣ ಹಾಗೂ ಔದ್ಯೋಗೀಕರಣದ ಭರಾಟೆಯಲ್ಲಿ ಅರಣ್ಯ ನಾಶ, ಪರಿಸರ ಹಾನಿ ಮತ್ತು ಹವಾಮಾನ ವೈಪರೀತ್ಯ ದಿನೇ ದಿನೇ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ, ತಮ್ಮ ಸಂಪೂರ್ಣ ಜೀವನವನ್ನೇ ಪರಿಸರ ಸಂರಕ್ಷಣೆಗೆ ಅರ್ಪಿಸಿದ ಅಪರೂಪದ ವ್ಯಕ್ತಿತ್ವವಾಗಿ ಮುಂಡರಗಿ ತಾಲೂಕಿನ ಡಂಬಳ ಗ್ರಾಮದ ಸಾಮಾಜಿಕ ಕಾರ್ಯಕರ್ತ, ಹೋರಾಟಗಾರ ಹಾಗೂ ಪರಿಸರ ಪ್ರೇಮಿ ಗೋಣಿಬಸಪ್ಪ ಎಸ್. ಕೊರ್ಲಹಳ್ಳಿ ಗಮನ ಸೆಳೆಯುತ್ತಾರೆ.

ಪರಿಸರ ಉಳಿಸಿ ಬೆಳೆಸುವ ಸಂಕಲ್ಪದೊಂದಿಗೆ ದಶಕಗಳ ಕಾಲ ಹಸಿರು ಅಭಿಯಾನ ನಡೆಸುತ್ತಿರುವ ಗೋಣಿಬಸಪ್ಪ ಕೊರ್ಲಹಳ್ಳಿ ಅವರು, ಲಿಂ. ಪ.ಪೂ. ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಆಶಯದಂತೆ ಸಾವಿರಾರು ಗಿಡಗಳನ್ನು ನೆಟ್ಟು, ಪರಿಸರ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಶಾಲೆ, ಕಾಲೇಜುಗಳಲ್ಲಿ ಉಪನ್ಯಾಸಗಳ ಮೂಲಕ ಪರಿಸರ ಪ್ರಜ್ಞೆ ಬೆಳೆಸುತ್ತಿರುವ ಅವರು, ಗ್ರಾಮೀಣ ಭಾಗದಲ್ಲೇ ಪರಿಸರ ಚಳವಳಿಗೆ ಹೊಸ ದಿಕ್ಕು ನೀಡಿದ್ದಾರೆ.

ಹಲವಾರು ದಶಕಗಳ ಹಿಂದೆ ಡಂಬಳ ಗ್ರಾಮದಲ್ಲಿಯೇ "ತೋಂಟದಾರ್ಯ ಪರಿಸರ ಸಂರಕ್ಷಣಾ ವೇದಿಕೆ" ಸ್ಥಾಪಿಸಿ ಅದರ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಗೋಣಿಬಸಪ್ಪ ಕೊರ್ಲಹಳ್ಳಿ, ಲಿಂ. ಪ.ಪೂ. ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ನೇತೃತ್ವದಲ್ಲಿ ಪರಿಸರ ಸಂರಕ್ಷಣೆಯ ದೊಡ್ಡ ಅಭಿಯಾನ ರೂಪಿಸಿದರು.

ಡಂಬಳ ಬಸ್ ನಿಲ್ದಾಣ, ಆರೋಗ್ಯ ಕೇಂದ್ರ, ಶಾಲೆ-ಕಾಲೇಜು ಮೈದಾನಗಳು ಸೇರಿದಂತೆ ಅನೇಕ ಸಾರ್ವಜನಿಕ ಸ್ಥಳಗಳಲ್ಲಿ ಅರಣ್ಯ ಬೆಳೆಸುವ ಗುರಿಯೊಂದಿಗೆ ಸಾವಿರಾರು ಗಿಡಗಳನ್ನು ನೆಟ್ಟು, ಗ್ರಾಮಕ್ಕೆ ಹಸಿರು ಹೊನ್ನು ತುಂಬಿದರು. ಪರಿಸರ ಪ್ರೇಮ ಕೇವಲ ಮಾತಿನಲ್ಲಿ ಉಳಿಯದೆ, ತಮ್ಮ ಸ್ವಂತ ಜಮೀನಲ್ಲಿಯೂ ಸಾವಿರಾರು ಸಾಗುವಾನಿ, ಮಾವು, ಪೇರಲ, ನೀರಲೆ ಸೇರಿದಂತೆ ವಿವಿಧ ಮರಗಳನ್ನು ಬೆಳೆಸಿ ಮಾದರಿಯಾಗಿದ್ದಾರೆ.



ಗದಗ ಜಿಲ್ಲೆಯ ಹಳ್ಳಿಗುಡಿ ಗ್ರಾಮದಲ್ಲಿ ನಡೆದ ಪೋಸ್ಕೋ ವಿರೋಧಿ ಪರಿಸರ ಹೋರಾಟದಲ್ಲಿ ಗೋಣಿಬಸಪ್ಪ ಕೊರ್ಲಹಳ್ಳಿ ಅವರು ಎಲೆಮರೆ ಕಾಯಿಯಂತೆ ಸಕ್ರಿಯ ಪಾತ್ರವಹಿಸಿದ್ದನ್ನು ಪರಿಸರ ಹೋರಾಟಗಾರರು ಇಂದು ಸ್ಮರಿಸುತ್ತಾರೆ.

ಈ ಹೋರಾಟದಲ್ಲಿ ಮೇಧಾ ಪಾಟ್ಕರ್, ಲಿಂ. ಪ.ಪೂ. ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು, ನಂದಿವೇರಿ ಶಿವಕುಮಾರ ಸ್ವಾಮೀಜಿಗಳು, ಹೋರಾಟಗಾರ ವಾಯ್.ಎನ್. ಗೌಡರ ಸೇರಿದಂತೆ ಹಲವಾರು ಪರಿಸರ ಹೋರಾಟಗಾರರು ಹಾಗೂ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸಿದ್ದರು. ಪರಿಸರದ ಪರ ನಡೆದ ಆ ಹೋರಾಟದಲ್ಲಿ ಗೋಣಿಬಸಪ್ಪ ಅವರ ಹಸಿರು ಬದ್ಧತೆ ಸ್ಪಷ್ಟವಾಗಿ ವ್ಯಕ್ತವಾಗಿತ್ತು.

ಪರಿಸರ ಜಾಗೃತಿಗಾಗಿ ಡಂಬಳದಲ್ಲಿ ಆರಂಭವಾದ ತೋಂಟದಾರ್ಯ ಪರಿಸರ ಸಂಘಟನೆಯ ಮೂಲಕ ಅನೇಕರು ಹಸಿರು ಚಳವಳಿಗೆ ಕೈಜೋಡಿಸಿದರು. ತೋಂಟದಾರ್ಯ ಮಠದ ವ್ಯವಸ್ಥಾಪಕರಾಗಿರುವ ಹಾಗೂ ಸಂಘಟನೆಯ ಗೌರವಾಧ್ಯಕ್ಷರಾದ ಜಿ.ವಿ. ಹಿರೇಮಠ, ಪತ್ರಕರ್ತ ಸಿ.ಕೆ. ಗಣಪ್ಪನವರ, ಪರಿಸರವಾದಿ ಸಿ.ಎಸ್. ಅರಸನಾಳ, ವ್ಹಿ.ಎಫ್. ಅಂಗಡಿ, ಮರಿತೆಮ್ಮಪ್ಪ ಆದಮ್ಮನವರ, ಮಂಜುನಾಥ ಸಂಜೀವಣ್ಣನವರ, ಆರ್.ಆರ್. ಕೊರ್ಲಗಟ್ಟಿ, ರಂಗಪ್ಪ ಜೊಂಡಿ, ವೀರಣ್ಣ ನಂಜಪ್ಪನವರ ಸೇರಿದಂತೆ ಹಲವಾರು ಜನರು ಪರಿಸರ ಅಭಿಯಾನದಲ್ಲಿ ಕೈಜೋಡಿಸಿದರು.

ಇದಲ್ಲದೇ ದಿವಂಗತ ಕೊಟ್ರಪ್ಪ ಕೊಟ್ಟೂರಶೆಟ್ಟರ ಹಾಗೂ ಚಂದ್ರಶೇಖಪ್ಪ ಗಡಗಿ ಸೇರಿದಂತೆ ಅನೇಕರು ಸಂಘಟನೆಯ ಮೂಲಕ ಪರಿಸರ ಸೇವೆ ಸಲ್ಲಿಸಿರುವುದನ್ನು ಗೋಣಿಬಸಪ್ಪ ಕೊರ್ಲಹಳ್ಳಿ ಸ್ಮರಿಸುತ್ತಾರೆ.

ಈ ಭಾಗದ ಮಾಜಿ ಶಾಸಕ ಹಾಗೂ ಸಚಿವರಾಗಿದ್ದ ಎಸ್. ಎಸ್. ಪಾಟೀಲರು, ಪ್ರಸ್ತುತ ಶಾಸಕ ಜಿ.ಎಸ್. ಪಾಟೀಲರು ಹಾಗೂ ಹೋರಾಟಗಾರ ವಾಯ್.ಎನ್. ಗೌಡರವರು ಪರಿಸರ ಜಾಗೃತಿಯಲ್ಲಿ ಭಾಗವಹಿಸಿ ಕಪ್ಪತ್ತಗುಡ್ಡ ರಕ್ಷಣೆಗೆ ಬೆಂಬಲ ನೀಡಿದ್ದಾರೆ.

ಅರಣ್ಯ ಇಲಾಖೆ ಹಾಗೂ ಸಾರ್ವಜನಿಕರ ಸಹಭಾಗಿತ್ವದಲ್ಲಿ ಕಪ್ಪತ್ತಗುಡ್ಡ ಪ್ರದೇಶದಲ್ಲಿ ಅರಣ್ಯೀಕರಣಕ್ಕೆ ಒತ್ತು ನೀಡಲಾಗಿದೆ. ನೀರಾವರಿ ಯೋಜನೆಗಳನ್ನು ಜಾರಿಗೆ ತಂದು ಕೆರೆ-ಕಟ್ಟೆಗಳಲ್ಲಿ ನೀರು ತುಂಬಿಸುವ ಕಾರ್ಯ ನಡೆದಿರುವುದು ಪರಿಸರ ಸಮತೋಲನ ಕಾಪಾಡುವಲ್ಲಿ ಮಹತ್ವದ ಹೆಜ್ಜೆಯಾಗಿದೆ.

ಗೋಣಿಬಸಪ್ಪ ಕೊರ್ಲಹಳ್ಳಿ ಅವರು ಶಾಲೆ-ಕಾಲೇಜುಗಳಲ್ಲಿ ಪರಿಸರ ಉಪನ್ಯಾಸಗಳನ್ನು ನೀಡಿ, ಕಪ್ಪತ್ತಗುಡ್ಡಕ್ಕೆ ಬೆಂಕಿ ಹಚ್ಚುವುದು, ಅರಣ್ಯ ನಾಶ ಮಾಡುವುದು ಹಾಗೂ ವನ್ಯಜೀವಿಗಳ ಜೀವಕ್ಕೆ ಅಪಾಯ ತರುವ ಚಟುವಟಿಕೆಗಳ ವಿರುದ್ಧ ಜನಜಾಗೃತಿ ಮೂಡಿಸುತ್ತಿದ್ದಾರೆ.

**– ಶ್ರೀಕಾಂತ ಬಡಕಣ್ಣವರ,** ಡಂಬಳ

### ಪರಿಸರವೇ ಬದುಕು ಎನ್ನುವ ಹಸಿರು ಹೋರಾಟಗಾರ

**ಪರಿಸರ ಜಾಗೃತಿಗಾಗಿ ತಮ್ಮ ಸಂಪೂರ್ಣ ಜೀವನವನ್ನೇ ಮುಡಿಪಾಗಿಟ್ಟಿರುವ ಗೋಣಿಬಸಪ್ಪ ಎಸ್. ಕೊರ್ಲಹಳ್ಳಿ ಅವರು, ದಶಕಗಳ ಕಾಲ ಪರಿಸರ ಸಂಘಟನೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಚಲಿತ ಪತ್ರಿಕೆಯ ಪತ್ರಕರ್ತರಾಗಿಯೂ ಕಾರ್ಯನಿರ್ವಹಿಸಿರುವ ಅವರು, ಸಾಮಾಜಿಕ ಹೋರಾಟಗಾರ ಹಾಗೂ ಪರಿಸರ ಕಾರ್ಯಕರ್ತರಾಗಿ ಗುರುತಿಸಿಕೊಂಡಿದ್ದಾರೆ.**

**ಕೃಷಿ ಪಂಡಿತ ಪ್ರಶಸ್ತಿ ಪುರಸ್ಕೃತರಾಗಿರುವ ಗೋಣಿಬಸಪ್ಪ ಅವರು, ಕಲೆ, ಸಾಹಿತ್ಯ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿಯೂ ಸಕ್ರಿಯರಾಗಿದ್ದು, ಪರಿಸರ ಕಾಳಜಿ ಮೂಲಕ ಸಮಾಜದಲ್ಲಿ ವಿಶಿಷ್ಟ ಗುರುತನ್ನು ಮೂಡಿಸಿದ್ದಾರೆ.**

# ಎಲ್ಲ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್: ಹೋರಾಟಕ್ಕೆ ಸಿಕ್ಕ ಜಯ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಲಾಗುವುದು ಎಂದು ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿರುವುದನ್ನು ಎಐಡಿಎಸ್‌ಓ (ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆ) ಸ್ವಾಗತಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಎಐಡಿಎಸ್‌ಓ ಗದಗ ಜಿಲ್ಲಾ ಸಂಚಾಲಕಿ ಎಂ. ಶಾಂತಿ, "ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಒದಗಿಸಬೇಕು ಎಂಬ ಬೇಡಿಕೆಗೆ ದಶಕಗಳಿಂದ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳು ಹೋರಾಟ ನಡೆಸುತ್ತಿದ್ದರು. ಸರ್ಕಾರದ ಈ ಘೋಷಣೆ ವಿದ್ಯಾರ್ಥಿ ಹೋರಾಟಕ್ಕೆ ಸಂದ ಮಹತ್ವದ ಜಯವಾಗಿದೆ" ಎಂದು ತಿಳಿಸಿದ್ದಾರೆ.

ಸರ್ಕಾರದ ನಿರ್ಧಾರವನ್ನು ಸ್ವಾಗತಿಸುತ್ತಲೇ, ಹೊಸ ಶೈಕ್ಷಣಿಕ ವರ್ಷದ ಆರಂಭದಿಂದಲೇ ಈ ಯೋಜನೆಯನ್ನು ಜಾರಿಗೊಳಿಸಬೇಕು ಎಂದು ಎಐಡಿಎಸ್‌ಓ ಸರ್ಕಾರವನ್ನು ಆಗ್ರಹಿಸಿದೆ.

ವಿದ್ಯಾರ್ಥಿಗಳ ಶಿಕ್ಷಣದ ಹಕ್ಕು ಹಾಗೂ ಸಂಚಾರದ ಸೌಲಭ್ಯವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ತ್ವರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಎಂ. ಶಾಂತಿ ಮನವಿ ಮಾಡಿದ್ದಾರೆ.

# ಸಾಹಿತ್ಯಾಸಕ್ತರ ಅಭಿಪ್ರಾಯಕ್ಕೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಈ ಹಿಂದೆ ಮುದ್ರಿತವಾಗಿ ಪ್ರಸ್ತುತ ಲಭ್ಯವಿಲ್ಲದಿರುವ ಪ್ರಮುಖ ಕನ್ನಡ ಕೃತಿಗಳನ್ನು ಮರು ಮುದ್ರಣ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ ಮರು ಮುದ್ರಿಸಬೇಕಾದ ಕೃತಿಗಳ ಕುರಿತು ಸಾರ್ವಜನಿಕರು, ಸಾಹಿತ್ಯಾಸಕ್ತರು ಹಾಗೂ ಓದುಗರಿಂದ ಕೋರಿಕೆ ಮತ್ತು ಅಭಿಪ್ರಾಯಗಳನ್ನು ಆಹ್ವಾನಿಸಲಾಗಿದೆ.

ಈ ಕುರಿತು ಇಲಾಖೆಯ (http://kannadasiri.karnataka.gov.in) ನಲ್ಲಿ ಸಾರ್ವಜನಿಕ ಅಭಿಪ್ರಾಯ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ.

ಸಾರ್ವಜನಿಕರು ಮಹತ್ವದ ಕೃತಿಗಳ ಮರು ಮುದ್ರಣಕ್ಕೆ ಸಂಬಂಧಿಸಿದಂತೆ ತಮ್ಮ ಸಲಹೆ, ಕೋರಿಕೆ ಹಾಗೂ ಅಭಿಪ್ರಾಯಗಳನ್ನು ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ತಂಬಾಕು ರಹಿತ ದಿನಾಚರಣೆಯಲ್ಲಿ ಅಧಿಕಾರಿಗಳ ಕಳವಳ

# ತಂಬಾಕಿನ 'ಟ್ರೆಂಡ್'ಗೆ ಯುವಜನತೆ ಬಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಆಕರ್ಷಕ ಪ್ಯಾಕಿಂಗ್, ಬಣ್ಣ, ಸುವಾಸನೆ ಮತ್ತು ಡಿಜಿಟಲ್ ಪ್ರಚಾರದ ಮೂಲಕ ಯುವಜನರನ್ನು ತಂಬಾಕು ವ್ಯಸನದ ಬಲೆಗೆ ಸೆಳೆಯುತ್ತಿರುವ ಕುರಿತು ಗದಗದಲ್ಲಿ ನಡೆದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ಗಂಭೀರ ಕಳವಳ ವ್ಯಕ್ತವಾಯಿತು.

"ಆಕರ್ಷಣೆಯನ್ನು ಬಹಿರಂಗಪಡಿಸುವುದು – ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದುರಿಸುವುದು" ಎಂಬ ಘೋಷವಾಕ್ಯದೊಂದಿಗೆ ಜೂನ್ 3ರಂದು ಜಿಲ್ಲಾ ಎಸ್.ವಿ.ಟಿ ಪ್ಯಾರ್ ಮೆಡಿಕಲ್ ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಇಂಡಿಯನ್ ಕ್ಯಾನ್ಸರ್ ಸೊಸೈಟಿ, ಜಿಲ್ಲಾ ಎನ್‌ಸಿಡಿ ಘಟಕ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ, ತಂಬಾಕು ವ್ಯಸನದಿಂದ ಉಂಟಾಗುವ ರೋಗಗಳು ಹಾಗೂ ಸಾವುಗಳನ್ನು ನಿಯಂತ್ರಿಸಲು ನಿರಂತರ ಜಾಗೃತಿ ಕಾರ್ಯಕ್ರಮಗಳು ಅತ್ಯಗತ್ಯ ಎಂದು ಹೇಳಿದರು.

ಶಾಲೆ ಹಾಗೂ ಕಾಲೇಜುಗಳಲ್ಲಿ ತಂಬಾಕು ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಮೂಲಕವೇ ತಂಬಾಕು ಮುಕ್ತ ಯುವ ಪೀಳಿಗೆ ನಿರ್ಮಾಣ ಸಾಧ್ಯ ಎಂದು ತಿಳಿಸಿದರು. ಜೊತೆಗೆ ತಂಬಾಕು ನಿಯಂತ್ರಣ ಕಾಯ್ದೆ (ಕೋಟ್ಪಾ–2003) ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಯಾಗಬೇಕೆಂದು ಅಭಿಪ್ರಾಯಪಟ್ಟರು.



> "ನಿಕೋಟಿನ್ ದೇಹದ ಪ್ರತಿಯೊಂದು ಅಂಗದ ಮೇಲೂ ದುಷ್ಪರಿಣಾಮ ಬೀರುತ್ತದೆ; ತಂಬಾಕು ಕ್ಯಾನ್ಸರ್ ಸೇರಿದಂತೆ ಮಾರಕ ರೋಗಗಳಿಗೆ ಕಾರಣ"
> **– ಡಾ. ಪ್ರೀತ್ ಖೋನಾ,** ತಾಲೂಕು ಆರೋಗ್ಯಾಧಿಕಾರಿ

> "ತಂಬಾಕು ವ್ಯಸನದ ವಿರುದ್ಧ ಜಾಗೃತಿ ಮೂಡಿಸದಿದ್ದರೆ ಮುಂದಿನ ಪೀಳಿಗೆಯ ಆರೋಗ್ಯವೇ ಅಪಾಯಕ್ಕೆ ಸಿಲುಕಲಿದೆ"
> **– ಸಿ.ಎಸ್. ಶಿವನಗೌಡ್ರ,** ಹಿರಿಯ ದಿವಾಣಿ ನ್ಯಾಯಾಧೀಶರು

ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ತಂಬಾಕು ಉತ್ಪನ್ನಗಳನ್ನು ವಿವಿಧ ಬಣ್ಣ, ಫ್ಲೇವರ್, ಸುವಾಸನೆ ಹಾಗೂ ಡಿಜಿಟಲ್ ಮಾರ್ಕೆಟಿಂಗ್ ಮೂಲಕ ಯುವಜನರನ್ನು ಸೆಳೆಯುವ ರೀತಿಯಲ್ಲಿ ಮಾರುಕಟ್ಟೆಗೆ ತರಲಾಗುತ್ತಿದೆ ಎಂದು ಹೇಳಿದರು.

ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಸೇರಿದಂತೆ ಅನೇಕ ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ ಎಂದು ಅವರು ಎಚ್ಚರಿಸಿದರು.

ಜಿಲ್ಲಾ ಆಸ್ಪತ್ರೆಯ ರೂಂ ನಂ.189ರಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರ ಕಾರ್ಯನಿರ್ವಹಿಸುತ್ತಿದ್ದು, ಅಲ್ಲಿ ಉಚಿತ ಆಪ್ತ ಸಮಾಲೋಚನೆ ಹಾಗೂ ಔಷಧೋಪಚಾರ ಸೇವೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಎಸ್.ವಿ.ಟಿ ಪ್ಯಾರ್ ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ವಿನಯ ಕುಬಸದ್ ಮಾತನಾಡಿ, ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಅತ್ಯಂತ ಅಗತ್ಯವಾಗಿದ್ದು, ವಿದ್ಯಾರ್ಥಿಗಳು ಈ ಮಾಹಿತಿಯನ್ನು ಕುಟುಂಬ ಹಾಗೂ ಸಮಾಜಕ್ಕೆ ತಲುಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾಣ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ಬಸಮ್ಮ ಚಿತ್ತರಗಿ, ರೇಷ್ಮಾ ಎನ್. ನದಾಫ್, ಪಂಪಾಮತಿ, ವಿರೇಶ ಮದಕಟ್ಟಿ, ಶಿವಕುಮಾರ ಬಗಾಡೆ ಹಾಗೂ ಕಾಲೇಜಿನ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಎಂ. ರಬ್ಬನಗೌಡ ನಿರೂಪಿಸಿದರು.

### ಶಾಲೆ ಸುತ್ತ ತಂಬಾಕು ಮಾರಾಟ ಕಂಡರೆ 112ಕ್ಕೆ ಕರೆ

ಉಪ ಪೊಲೀಸ್ ವರಿಷ್ಠಾಧಿಕಾರಿ ಎಂ.ಐ. ಸಜ್ಜನವರ ಮಾತನಾಡಿ, ಶಾಲೆಗಳ ಸುತ್ತಮುತ್ತ 100 ಗಜ ವ್ಯಾಪ್ತಿಯಲ್ಲಿ ತಂಬಾಕು ಮಾರಾಟ ಕಂಡುಬಂದಲ್ಲಿ ಅಥವಾ ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ 112ಕ್ಕೆ ಕರೆ ಮಾಡಿದರೆ ತಕ್ಷಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಡ್ರಗ್ ಫ್ರೀ ಆ್ಯಪ್ ಮೂಲಕ ಕಾನೂನುಬಾಹಿರ ಮಾದಕ ವಸ್ತುಗಳ ಬಳಕೆ, ಸಂಗ್ರಹಣೆ ಹಾಗೂ ಉತ್ಪಾದನೆ ಕುರಿತು ಸಾರ್ವಜನಿಕರು ದೂರು ನೀಡಬಹುದಾಗಿದೆ ಎಂದು ಹೇಳಿದರು.

### ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಶಾಲಾ ಆರಂಭೋತ್ಸವದಲ್ಲಿ ಜಗದೀಶ ಪೂಜಾರ ಕರೆ

# ಶಿಕ್ಷಣದ ಜೊತೆಗೆ ಸಂಸ್ಕಾರವೂ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಮಕ್ಕಳಿಗೆ ಕೇವಲ ಸೌಕರ್ಯಗಳಿಗಿಂತ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡುವುದು ಅತ್ಯಂತ ಮುಖ್ಯವಾಗಿದೆ ಎಂದು ರತ್ನಾಕರವಾಣಿ ದಿನಪತ್ರಿಕೆಯ ಸಂಪಾದಕರಾದ ಜಗದೀಶ ಪೂಜಾರ ಹೇಳಿದರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿ ವತಿಯಿಂದ ಆಯೋಜಿಸಿದ್ದ ಶಾಲಾ ಆರಂಭೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪೆನ್ಸಿಲ್ ಹಾಗೂ ಸಿಹಿ ವಿತರಿಸಿ ಮಾತನಾಡಿದ ಅವರು, "ಇಂದು ಮಕ್ಕಳಲ್ಲಿ ಸಂಸ್ಕಾರದ ಕೊರತೆಯಿಂದ ದುಶ್ಚಟಗಳು ಹೆಚ್ಚುತ್ತಿವೆ. ಗುರು–ಹಿರಿಯರಿಗೆ ಗೌರವ ಕಡಿಮೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆ" ಎಂದು ಅಭಿಪ್ರಾಯಪಟ್ಟರು.

ಸಂಸ್ಥೆಯಲ್ಲಿ ಮಕ್ಕಳಿಗೆ ನೀಡಲಾಗುತ್ತಿರುವ ಶಿಕ್ಷಣ ಹಾಗೂ ಸಂಸ್ಕಾರವನ್ನು ಶ್ಲಾಘಿಸಿದ ಅವರು, "ಪ್ರತಿ ಮನೆ ಮತ್ತು ಶಾಲೆಯಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಮೌಲ್ಯಾಧಾರಿತ ಸಂಸ್ಕಾರ ನೀಡಬೇಕು" ಎಂದು ಕರೆ ನೀಡಿದರು.



ಇಂದಿನ ದಿನಗಳಲ್ಲಿ ಶಿಕ್ಷಣ ಸಂಸ್ಥೆ ನಡೆಸುವುದು ಸುಲಭದ ಕೆಲಸವಲ್ಲ. ಒಂದು ಸಂಸ್ಥೆ ಯಶಸ್ವಿಯಾಗಿ ಬೆಳೆಯಬೇಕಾದರೆ ಶಿಕ್ಷಕರು ಹಾಗೂ ಪೋಷಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಸಂಸ್ಥೆ ತನ್ನದೇ ಸ್ವಂತ ಕಟ್ಟಡ ನಿರ್ಮಿಸಿ ಬಡ ಮಕ್ಕಳಿಗೆ ಪದವಿ ಮಟ್ಟದವರೆಗೆ ಶಿಕ್ಷಣ ಸೇವೆ ನೀಡಲಿ ಎಂದು ಹಾರೈಸಿದರು.

> "ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಿದಾಗ ಮಾತ್ರ ಸಮಾಜಕ್ಕೆ ಉತ್ತಮ ನಾಗರಿಕರನ್ನು ರೂಪಿಸಲು ಸಾಧ್ಯ."
> **– ಜಗದೀಶ ಪೂಜಾರ,** ಸಂಪಾದಕರು, ರತ್ನಾಕರವಾಣಿ ದಿನಪತ್ರಿಕೆ

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಇಮರಾಪೂರ, ಕಾರ್ಯದರ್ಶಿ ಕವಿತಾ ಇಮರಾಪೂರ, ನಿರ್ದೇಶಕ ಮೋಹನ ಇಮರಾಪೂರ, ಸಲಹಾ ಸಮಿತಿ ಸದಸ್ಯರಾದ ಮುತ್ತು ಜಡಿ ಹಾಗೂ ಚನ್ನಬಸಮ್ಮ ಹಾಳಕೇರಿ, ಆಡಳಿತಾಧಿಕಾರಿ ಸಾವಿತ್ರಿ ಕವಡಕಿ, ಮುಖ್ಯೋಪಾಧ್ಯಾಯಿನಿ ಎಚ್. ಎಂ. ನದಾಫ್, ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ವಂದನಾ ಕಲ್ಮನಿ, ಶೋಭಾ ಸಂಬರಗಿಮಠ, ಸಿಬ್ಬಂದಿ ಲಕ್ಷ್ಮೀ ಕಮಡೊಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಶಾಲಾ ಮಕ್ಕಳಿಗೆ ಗುಲಾಬಿ ಹೂ ನೀಡಿ, ಹಣೆಗೆ ತಿಲಕವಿಟ್ಟು, ಆರತಿ ಬೆಳಗಿ ಹಾಗೂ ಸಿಹಿ ಹಂಚುವ ಮೂಲಕ ಆತ್ಮೀಯವಾಗಿ ಶಾಲೆಗೆ ಬರಮಾಡಿಕೊಳ್ಳಲಾಯಿತು.

### ಕನ್ನಡದ ಭಗವದ್ಗೀತೆ ಎಂದ ದ್ವಾರಕೀಶರೆಡ್ಡಿ; ಜೀವನ ಮೌಲ್ಯಗಳ ಕುರಿತು ಅರ್ಥಪೂರ್ಣ ಉಪನ್ಯಾಸ

# 'ಮಂಕುತಿಮ್ಮನ ಕಗ್ಗ' ಬದುಕಿಗೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಕುತಿಮ್ಮನ ಕಗ್ಗ ಕನ್ನಡದ ಭಗವದ್ಗೀತೆಯಾಗಿದ್ದು, ಜೀವನ, ಧರ್ಮ, ನೈತಿಕತೆ ಹಾಗೂ ಮಾನವ ಸ್ವಭಾವದ ಕುರಿತು ದಾರಿದೀಪವಾಗಿರುವ ಮಹತ್ವದ ಕೃತಿ ಎಂದು ಹೂವಿನ ಹಡಗಲಿಯ ಅಧ್ಯಾಪಕ ದ್ವಾರಕೀಶರೆಡ್ಡಿ ಅಭಿಪ್ರಾಯಪಟ್ಟರು.

ನಗರದ ಸಿದ್ಧಲಿಂಗೇಶ್ವರ ಸಾಹಿತ್ಯ ಭವನದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ ಹಾಗೂ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಮಂಕುತಿಮ್ಮನ ಕಗ್ಗದಲ್ಲಿರುವ ಜೀವನ ಮೌಲ್ಯಗಳು' ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಗ್ಗದ ಪ್ರತಿಯೊಂದು ಮುಕ್ತಕವೂ ಜೀವನ ದರ್ಶನ ಮಾಡಿಸುವ ಶಕ್ತಿಯನ್ನು ಹೊಂದಿದೆ. ಬದುಕಿನ ಕಷ್ಟ–ಸುಖಗಳನ್ನು ಸಮಚಿತ್ತದಿಂದ ಸ್ವೀಕರಿಸಿ ಸ್ಥಿತಪ್ರಜ್ಞನಾಗಿ ಬದುಕನ್ನು ಮುನ್ನಡೆಸುವ ದಾರಿಯನ್ನು ಈ ಕೃತಿ ತೋರಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವೇಕಾನಂದಗೌಡ ಪಾಟೀಲ ಮಾತನಾಡಿ, "ಕನ್ನಡ ಕಾವ್ಯಗಳಲ್ಲಿ ಮಂಕುತಿಮ್ಮನ ಕಗ್ಗ ಮಹೋನ್ನತ ಕೃತಿಯಾಗಿದ್ದು, ಜೀವನದ ಯಾವುದೇ ಸಂದರ್ಭದಲ್ಲೂ ಸಾಂತ್ವನ ಮತ್ತು ಪರಿಹಾರ ನೀಡುವ ಶಕ್ತಿ ಇದಕ್ಕಿದೆ" ಎಂದರು.



ಡಾ. ನಿಂಗು ಸೊಲಗಿ ಮಾತನಾಡಿ, ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘವು 136 ವರ್ಷಗಳ ಇತಿಹಾಸ ಹೊಂದಿರುವ ಹೆಮ್ಮೆಯ ಸಂಸ್ಥೆಯಾಗಿದ್ದು, ಕನ್ನಡ ನಾಡು–ನುಡಿ ಹಾಗೂ ಸಂಸ್ಕೃತಿಯ ಉಳಿವಿಗಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕುಮಾರಿ ಶ್ರದ್ಧಾ ಉಜ್ವಲ ಕಬಾಡಿ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಿತು.

> "ಪ್ರಕೃತಿ ಹಾಗೂ ಸಮಾಜದೊಂದಿಗೆ ಸಮನ್ವಯ ಸಾಧಿಸಿಕೊಂಡು ಬದುಕಲು ಕಗ್ಗ ಪ್ರೇರಣೆ ನೀಡುತ್ತದೆ. ಆತ್ಮಾವಲೋಕನದ ಮೂಲಕ ವ್ಯಕ್ತಿತ್ವ ವಿಕಸನಕ್ಕೆ ಇದು ನೆರವಾಗುತ್ತದೆ."
> **– ದ್ವಾರಕೀಶರೆಡ್ಡಿ**

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಅನ್ನದಾನಿ ಹಿರೇಮಠ, ಸತೀಶ ಚನ್ನಪ್ಪಗೌಡರ, ಅಂದಾನಪ್ಪ ವಿಭೂತಿ, ಬಿ.ಜಿ. ಗಿರಿತಮ್ಮಣ್ಣವರ, ರವಿ ದೇವರಡ್ಡಿ, ಶಾರದಾ ಬಾಣದ, ರಾಜೇಶ್ವರಿ ಬಡ್ನಿ, ಉಮಾ ಪಾಟೀಲ, ಜ್ಯೋತಿ ಕಬಾಡಿ, ಹೇಮಲತಾ ಬೇಗೂರ, ನಂದೀಶ ಕಲ್ಮಠ, ಸಲೀಂ ಬಳಬಟ್ಟಿ, ಸಿ.ಎಂ. ಮಾರನಬಸರಿ, ಗಿರಿಯಪ್ಪ ಮಡಿವಾಳರ, ಶಶಿಕಾಂತ ಕೊರ್ಲಹಳ್ಳಿ, ಸುಧಾ ಬಳ್ಳಿ, ಅಶೋಕ ಗಿರಡ್ಡಿ, ಪರಶುರಾಮ ಜಂಬಗಿ, ಸತೀಶ ಕುಲಕರ್ಣಿ, ಎಸ್.ಪಿ. ಹೊಂಬಳ, ಶೈಲಜಾ ಗಿಡ್ನಂದಿ, ರತ್ನಾ ಪುರಂತರ, ಜೆ.ಎ. ಪಾಟೀಲ, ವಿಜಯ ಕಿರೇಸೂರ, ಕಿರಣ ಗುಗ್ಗರಿ, ಅಶೋಕ ಸುತಾರ, ಷಡಕ್ಷರಿ ಮೆಣಸಿನಕಾಯಿ, ಎಸ್. ಎನ್. ಗದ್ದಿ ಮೊದಲಾದವರು ಉಪಸ್ಥಿತರಿದ್ದರು.

ಡಾ. ದತ್ತಪ್ರಸನ್ನ ಪಾಟೀಲ ಸ್ವಾಗತಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ರಾಹುಲ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು.

### ಮಹಿಳಾ ಸಮಾನತೆಗಾಗಿ ಇಬ್ಬರ ಹೋರಾಟವೂ ಸಮಾಜ ಪರಿವರ್ತನೆಯ ದಾರಿದೀಪ: ಡಾ. ಕಸ್ತೂರಿ ದಳವಾಯಿ

# ಶರಣರ ವಚನಗಳಿಂದ ಫುಲೆ ದಂಪತಿಯ ಶಿಕ್ಷಣ ಕ್ರಾಂತಿವರೆಗೆ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶರಣರ ಲಿಂಗ ಸಮಾನತೆ ತತ್ವ ಹಾಗೂ ಮಹಾತ್ಮ ಜ್ಯೋತಿಬಾ ಫುಲೆಸಾವಿತ್ರಿಬಾಯಿ ಫುಲೆ ಅವರ ಸ್ತ್ರೀ ಶಿಕ್ಷಣ ಚಳುವಳಿಯ ಆಶಯಗಳು ಒಂದೇ ಧ್ಯೇಯದ ಪಥವಾಗಿವೆ ಎಂದು ಗದಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರದ ಸಹ ಪ್ರಾಧ್ಯಾಪಕಿ ಡಾ. ಕಸ್ತೂರಿ ದಳವಾಯಿ ಅಭಿಪ್ರಾಯಪಟ್ಟರು.

ಅಕ್ಷರ ಭಾರತ ಪ್ರತಿಷ್ಠಾನ, ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಸಂಯುಕ್ತ ಆಶ್ರಯದಲ್ಲಿ ಸ್ಥಳೀಯ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆದ 73ನೇ ಶಿವಾನುಭವ ಗೋಷ್ಠಿಯಲ್ಲಿ ಅವರು ಮುಖ್ಯ ಉಪನ್ಯಾಸ ನೀಡಿದರು.

"ಹನ್ನೆರಡನೇ ಶತಮಾನದ ಶಿವಶರಣರು ತಮ್ಮ ವಚನಗಳ ಮೂಲಕ ಮಹಿಳೆಯರಿಗೂ ಸಮಾನ ಅವಕಾಶ ಮತ್ತು ಗೌರವ ದೊರಕಬೇಕು ಎಂಬ ಸಂದೇಶ ಸಾರಿದ್ದರು. ಅದೇ ಚಿಂತನೆಯ ಮುಂದುವರಿದ ರೂಪವಾಗಿ ಮಹಾತ್ಮ ಜ್ಯೋತಿಬಾ ಫುಲೆ ಹಾಗೂ ಸಾವಿತ್ರಿಬಾಯಿ ಫುಲೆ ಸ್ತ್ರೀ ಶಿಕ್ಷಣದ ಚಳುವಳಿಯನ್ನು ರೂಪಿಸಿ ಮಹಿಳೆಯರ ಬದುಕಿನಲ್ಲಿ ಹೊಸ ಬೆಳಕು ಮೂಡಿಸಿದರು" ಎಂದು ಹೇಳಿದರು.



"ಸಮಾಜದ ವಿರೋಧ ಮತ್ತು ಅನೇಕ ಸವಾಲುಗಳ ನಡುವೆಯೂ ಫುಲೆ ದಂಪತಿ ಆರಂಭಿಸಿದ ಸ್ತ್ರೀ ಶಿಕ್ಷಣ ಹೋರಾಟ ಇಂದು ಸಾರ್ಥಕತೆಯನ್ನು ಕಂಡಿದೆ. ಮಹಿಳೆಯರು ಶಿಕ್ಷಣ, ವಿಜ್ಞಾನ, ಆಡಳಿತ ಹಾಗೂ ರಾಜಕೀಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿರುವುದು ಅವರು ಬೆಳಗಿಸಿದ ಜ್ಞಾನ ದೀಪದ ಫಲವಾಗಿದೆ" ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ ವಹಿಸಿದ್ದರು. ಹಿರಿಯ ಶಿಕ್ಷಕ ಜೆ.ಬಿ. ಪಾಟೀಲ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು, ಸಿಬ್ಬಂದಿ, ಭಕ್ತಾದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

### ಬಳಗಾನೂರು ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖೆಗೆ ಗ್ರಾಮಸ್ಥರಿಂದ ಸನ್ಮಾನ

# ಸಾಲ ಮರುಪಾವತಿಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ

■ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಬೆಳೆ ಸಾಲ, ಕಿರು ವ್ಯಾಪಾರ ಸಾಲ ಸೇರಿದಂತೆ ವಿವಿಧ ಯೋಜನೆಗಳಡಿ ನೀಡಿದ ಸಾಲಗಳ ಮರುಪಾವತಿಯಲ್ಲಿ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಹಿನ್ನೆಲೆಯಲ್ಲಿ ಬಳಗಾನೂರ ಗ್ರಾಮದ

ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖೆಯ ಸಿಬ್ಬಂದಿಯನ್ನು ಗ್ರಾಮಸ್ಥರು ಸನ್ಮಾನಿಸಿ ಗೌರವಿಸಿದರು.

ಗ್ರಾಹಕರು ನಿಗದಿತ ಸಮಯಕ್ಕೆ ಸಾಲ ಮರುಪಾವತಿಸಿ ಬ್ಯಾಂಕ್‌ನೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವುದರ ಜೊತೆಗೆ, ಶಾಖಾ ವ್ಯವಸ್ಥಾಪಕ ಅಶೋಕ ಬಾರಕೇರ ಹಾಗೂ ಸಿಬ್ಬಂದಿಯ ಕರ್ತವ್ಯನಿಷ್ಠೆ, ಸಮಯಪಾಲನೆ ಮತ್ತು ಗ್ರಾಹಕ ಸ್ನೇಹಿ ಸೇವೆಯನ್ನು ಗುರುತಿಸಿ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್. ಕಲ್ಮನಿ ಮಾತನಾಡಿ, "ಗ್ರಾಮೀಣ ಭಾಗದ ಜನರಿಗೆ ವಿಶ್ವಾಸಾರ್ಹ ಬ್ಯಾಂಕಿಂಗ್ ಸೇವೆ ನೀಡುತ್ತಿರುವ ಬಳಗಾನೂರು ಶಾಖೆ ಜಿಲ್ಲೆಯಲ್ಲೇ ಮಾದರಿಯಾಗಿದೆ" ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಶೇಖರಯ್ಯ ನನ್ನಯ್ಯನಮಠ, ಪ್ರೊ. ವಿ.ಬಿ. ಕರಮುಡಿ, ಎಂ.ಎ. ಪಾಟೀಲ, ಸಂಗಪ್ಪ ಗೂಳರಡ್ಡಿ, ಅರ್ಜುನ್ ಸಾಲಿ, ನಿಂಗಪ್ಪ ಮಡಿವಾಳರ, ರಾಜು ಪಡೇಸೂರ, ಶರಣಪ್ಪ ಹೊಂಬಳ ಸೇರಿದಂತೆ ಗ್ರಾಮದ ನಾಗರಿಕರು ಉಪಸ್ಥಿತರಿದ್ದರು.

ಸಿದ್ದಪ್ಪ ವಗ್ಗನವರ ಸ್ವಾಗತಿಸಿದರು. ಎಂ.ಆರ್. ಪಡೇಸೂರ ವಂದಿಸಿದರು.

**ಗದಗ ಗ್ರಾಮೀಣ ವಲಯದ 51 ಶಾಲೆಗಳಿಗೆ 56 ಅತಿಥಿ ಶಿಕ್ಷಕರ ಮಂಜೂರು**

## ಅತಿಥಿ ಶಿಕ್ಷಕರ ನೇಮಕಕ್ಕೆ ಹಸಿರು ನಿಶಾನೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಉಂಟಾಗಿರುವ ಶಿಕ್ಷಕರ ಕೊರತೆಯನ್ನು ತಾತ್ಕಾಲಿಕವಾಗಿ ನಿವಾರಿಸಲು ಶಿಕ್ಷಣ ಇಲಾಖೆ ಮಹತ್ವದ ಕ್ರಮ ಕೈಗೊಂಡಿದ್ದು, 2026–27ನೇ ಶೈಕ್ಷಣಿಕ ಸಾಲಿಗೆ ಗದಗ ಗ್ರಾಮೀಣ ವಲಯದ 51 ಸರ್ಕಾರಿ ಶಾಲೆಗಳಿಗೆ ಒಟ್ಟು 56 ಅತಿಥಿ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದ ಈ ಸಂಬಂಧ ಅಧಿಕೃತ ಆದೇಶ ಹೊರಬಿದ್ದಿದೆ. ಹರ್ಲಾಪುರ, ಮುಳಗುಂದ, ಹಾತಲಗೇರಿ, ಶಾಗೋಟಿ, ಕುರ್ತಕೋಟಿ, ನೀಲಗುಂದ, ಸೊರಟೂರು, ಹೊಂಬಳ, ಹುಲಕೋಟಿ ಸೇರಿದಂತೆ ಹಲವು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸಲು ಅನುಮೋದನೆ ನೀಡಲಾಗಿದೆ. ಕೆಲವು ಶಾಲೆಗಳಿಗೆ ತಲಾ ಇಬ್ಬರು ಶಿಕ್ಷಕರ ಹುದ್ದೆಗಳೂ ಮಂಜೂರಾಗಿವೆ.

ಇದರ ಜೊತೆಗೆ ಸರ್ಕಾರಿ ಪ್ರೌಢ ಶಾಲೆಗಳಲ್ಲಿಯೂ ಕನ್ನಡ, ಹಿಂದಿ, ಇಂಗ್ಲಿಷ್, ಗಣಿತ ಹಾಗೂ ವಿಜ್ಞಾನ ವಿಷಯಗಳಿಗೆ ಅತಿಥಿ ಶಿಕ್ಷಕರ ನೇಮಕಕ್ಕೆ ಅವಕಾಶ ಕಲ್ಪಿಸಲಾಗಿದೆ. ಸೊರಟೂರು, ಯಲಿಶಿರೂರ, ಮುಳಗುಂದ ಸೇರಿದಂತೆ ವಿವಿಧ ಶಾಲೆಗಳಿಗೆ ವಿಷಯವಾರು ಶಿಕ್ಷಕರ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಅತಿಥಿ ಶಿಕ್ಷಕರ ಆಯ್ಕೆ ಪ್ರಕ್ರಿಯೆಯನ್ನು ಸಂಬಂಧಿಸಿದ ಶಾಲೆಗಳ ಮುಖ್ಯಶಿಕ್ಷಕರೇ ನಡೆಸಲಿದ್ದು, ಸ್ಥಳೀಯ ಮಟ್ಟದಲ್ಲಿ ಪ್ರಕಟಣೆ ನೀಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲು ಸೂಚಿಸಲಾಗಿದೆ. ಮೆರಿಟ್ ಹಾಗೂ ಶೈಕ್ಷಣಿಕ ಅರ್ಹತೆ ಆಧಾರದಲ್ಲಿ ಪಾರದರ್ಶಕವಾಗಿ ನೇಮಕಾತಿ ನಡೆಸುವಂತೆ ಇಲಾಖೆ ನಿರ್ದೇಶನ ನೀಡಿದೆ.

ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ಮಾಸಿಕ ₹12 ಸಾವಿರ ಗೌರವಧನ ನಿಗದಿಪಡಿಸಲಾಗಿದೆ. ಅಗತ್ಯವಿದ್ದಲ್ಲಿ ನೇಮಕಾತಿಯನ್ನು ರದ್ದುಪಡಿಸುವ ಅಧಿಕಾರವೂ ಇಲಾಖೆಗೆ ಇರಲಿದೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಬೋಧನಾ ಕಾರ್ಯಕ್ಕೆ ಉಂಟಾಗಿದ್ದ ತೊಂದರೆ ನಡುವೆಯೇ ಈ ಕ್ರಮ ಕೈಗೊಳ್ಳಲಾಗಿದ್ದು, ಹೊಸ ನೇಮಕಾತಿಯಿಂದ ಗ್ರಾಮೀಣ ಭಾಗದ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳಿಗೆ ಚೈತನ್ಯ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

**ಸಮತೋಲಿತ ರಸಗೊಬ್ಬರ ಬಳಕೆ, ಸಾವಯವ ಗೊಬ್ಬರ ಅಳವಡಿಕೆ ಹಾಗೂ ನ್ಯಾನೋ ಯೂರಿಯಾ ಬಳಕೆಗೆ ಡಿಸಿ ಕರೆ**

# ಅಧಿಕ ಯೂರಿಯಾ ಬಳಕೆ ಅಪಾಯದ ಗಂಟೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೈತರು ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವುದರ ಜೊತೆಗೆ ಮಣ್ಣಿನ ಆರೋಗ್ಯವನ್ನು ಕಾಪಾಡುವ ಉದ್ದೇಶದಿಂದ ರಸಗೊಬ್ಬರಗಳನ್ನು ವೈಜ್ಞಾನಿಕ ರೀತಿಯಲ್ಲಿ ಹಾಗೂ ಶಿಫಾರಸು ಮಾಡಿದ ಪ್ರಮಾಣದಲ್ಲಿ ಬಳಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದ್ದಾರೆ.


ಪ್ರಸ್ತುತ ಜಿಲ್ಲೆಯಲ್ಲಿ ಯೂರಿಯಾ ಬಳಕೆ ಶಿಫಾರಸು ಪ್ರಮಾಣಕ್ಕಿಂತ ಹೆಚ್ಚಾಗುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ ಮಣ್ಣಿನ ಫಲವತ್ತತೆ ಕುಸಿತ, ಪೋಷಕಾಂಶಗಳ ಅಸಮತೋಲನ, ಉತ್ಪಾದನಾ ವೆಚ್ಚದಲ್ಲಿ ಹೆಚ್ಚಳ ಹಾಗೂ ಪರಿಸರ ಮಾಲಿನ್ಯದಂತಹ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದ್ದಾರೆ.

ಆದ್ದರಿಂದ ರೈತರು ಮಣ್ಣಿನ ಪರೀಕ್ಷೆ ಆಧಾರಿತ ಪೋಷಕಾಂಶ ನಿರ್ವಹಣೆಯನ್ನು ಅನುಸರಿಸಬೇಕು ಎಂದು ತಿಳಿಸಿದ್ದಾರೆ.

ಮಣ್ಣಿನ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಗೋಮಯ ಗೊಬ್ಬರ, ಕಾಂಪೋಸ್ಟ್, ವರ್ಮಿ ಕಾಂಪೋಸ್ಟ್, ಹಸಿರು ಗೊಬ್ಬರ, ಜೈವಿಕ ಗೊಬ್ಬರ ಹಾಗೂ ಬೆಳೆ ಅವಶೇಷಗಳಿಂದ ತಯಾರಿಸಲಾದ ಸಾವಯವ ಗೊಬ್ಬರಗಳ ಬಳಕೆಯನ್ನು ಹೆಚ್ಚಿಸಬೇಕು ಎಂದು ಸಲಹೆ ನೀಡಿದ್ದಾರೆ.

ಸಾವಯವ ಗೊಬ್ಬರಗಳ ಬಳಕೆಯಿಂದ ಮಣ್ಣಿನ ಸಾವಯವ ಇಂಗಾಲದ ಪ್ರಮಾಣ ಹೆಚ್ಚಾಗಿ, ಮಣ್ಣಿನ ರಚನೆ, ನೀರು ಹಿಡಿದಿಡುವ ಸಾಮರ್ಥ್ಯ ಹಾಗೂ ಸೂಕ್ಷ್ಮಜೀವಿಗಳ ಚಟುವಟಿಕೆ ಉತ್ತಮಗೊಳ್ಳುತ್ತದೆ ಎಂದು ತಿಳಿಸಿದ್ದಾರೆ.

ರೈತರು "ಸರಿಯಾದ ಗೊಬ್ಬರ, ಸರಿಯಾದ ಪ್ರಮಾಣ, ಸರಿಯಾದ ಸಮಯ ಹಾಗೂ ಸರಿಯಾದ ವಿಧಾನ" ಎಂಬ ತತ್ವದ ಅನುಸರಣೆಯಿಂದ ಗೊಬ್ಬರ ಬಳಕೆಯ ದಕ್ಷತೆ ಹೆಚ್ಚುವುದರ ಜೊತೆಗೆ ಉತ್ಪಾದನಾ ವೆಚ್ಚವೂ ಕಡಿಮೆಯಾಗುತ್ತದೆ ಎಂದು ಹೇಳಿದ್ದಾರೆ.



"ಮಣ್ಣಿನ ಆರೋಗ್ಯವೇ ಕೃಷಿಯ ಆಧಾರ ಸಮತೋಲಿತ ಗೊಬ್ಬರ ಬಳಕೆ ನಮ್ಮ ಜವಾಬ್ದಾರಿ"

– ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಜಿಲ್ಲೆಯಲ್ಲಿ ನ್ಯಾನೋ ಯೂರಿಯಾ ಬಳಕೆಯನ್ನು ಉತ್ತೇಜಿಸಲಾಗುತ್ತಿದ್ದು, ಇದರ ಬಳಕೆಯಿಂದ ಸಸ್ಯಗಳಿಗೆ ಸಾರಜನಕ ಪೋಷಕಾಂಶ ಪರಿಣಾಮಕಾರಿಯಾಗಿ ದೊರೆಯುತ್ತದೆ. ರಾಸಾಯನಿಕ ಯೂರಿಯಾ ಮೇಲಿನ ಅವಲಂಬನೆ ಕಡಿಮೆಯಾಗುವುದರ ಜೊತೆಗೆ ಗೊಬ್ಬರ ಬಳಕೆಯ ದಕ್ಷತೆ ಹೆಚ್ಚುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಕೃಷಿ ಇಲಾಖೆಯ ಶಿಫಾರಸಿನಂತೆ ನ್ಯಾನೋ ಯೂರಿಯಾವನ್ನು ಬಳಸುವಂತೆ ರೈತರಿಗೆ ಸಲಹೆ ನೀಡಲಾಗಿದೆ.

ಬೆಳೆವಾರು ಶಿಫಾರಸು ಮಾಡಿದ ಪ್ರಮಾಣದಲ್ಲಿ ಮಾತ್ರ ಗೊಬ್ಬರ ಬಳಸಬೇಕು. ರಸಗೊಬ್ಬರಗಳ ಜೊತೆಗೆ ಸಾವಯವ ಗೊಬ್ಬರ ಹಾಗೂ ಜೈವಿಕ ಗೊಬ್ಬರಗಳ ಸಮಗ್ರ ಬಳಕೆಗೆ ಆದ್ಯತೆ ನೀಡಬೇಕು ಎಂದು ತಿಳಿಸಲಾಗಿದೆ.

ಕೃಷಿ ಇಲಾಖೆ ಅಧಿಕಾರಿಗಳು, ರೈತ ಸಂಪರ್ಕ ಕೇಂದ್ರಗಳು ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ ತಾಂತ್ರಿಕ ಸಲಹೆಗಳನ್ನು ಪಡೆದು ಗೊಬ್ಬರ ಬಳಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದ್ದಾರೆ.

ರೈತರಿಗೆ ಅಗತ್ಯ ಪ್ರಮಾಣದ ಗೊಬ್ಬರ ಲಭ್ಯವಾಗುವಂತೆ ಜಿಲ್ಲಾಡಳಿತ ಕ್ರಮ ಕೈಗೊಂಡಿದ್ದು, ಜಿಲ್ಲೆಯ ಸಮಸ್ತ ರೈತರು ಸಮತೋಲಿತ ರಸಗೊಬ್ಬರ ಬಳಕೆ, ಸಾವಯವ ಕೃಷಿ ಪದ್ಧತಿಗಳ ಅಳವಡಿಕೆ ಹಾಗೂ ನ್ಯಾನೋ ಯೂರಿಯಾ ಬಳಕೆಯ ಮೂಲಕ ಮಣ್ಣಿನ ಆರೋಗ್ಯವನ್ನು ಕಾಪಾಡಿ ಸುಸ್ಥಿರ ಕೃಷಿಯತ್ತ ಹೆಜ್ಜೆ ಇಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದ್ದಾರೆ.

### ಕಾಳಸಂತೆ ಕಂಡರೆ ಮಾಹಿತಿ ನೀಡಿ

ಕಾಳಸಂತೆ, ಅಕ್ರಮ ಸಂಗ್ರಹಣೆ ಅಥವಾ ಅಧಿಕ ದರದಲ್ಲಿ ಗೊಬ್ಬರ ಮಾರಾಟದಂತಹ ಪ್ರಕರಣಗಳು ಕಂಡು ಬಂದಲ್ಲಿ ತಕ್ಷಣ ಕೃಷಿ ಇಲಾಖೆ ಅಥವಾ ಜಿಲ್ಲಾ ಆಡಳಿತದ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

**50% ಸಹಾಯಧನದೊಂದಿಗೆ ಸ್ವಯಂ ಉದ್ಯೋಗಕ್ಕೆ ಸರ್ಕಾರದ ಪ್ರೋತ್ಸಾಹ**

# ಯುವಕರ ಕೈಹಿಡಿದ 'ಸ್ವಾವಲಂಬಿ ಸಾರಥಿ' ಯೋಜನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗದ ಮೂಲಕ ಆರ್ಥಿಕ ಸ್ವಾವಲಂಬನೆ ಕಲ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಜಾರಿಗೆ ತಂದಿರುವ "ಸ್ವಾವಲಂಬಿ ಸಾರಥಿ ಯೋಜನೆ" ಮಹತ್ವಾಕಾಂಕ್ಷಿ ಯೋಜನೆಯಾಗಿದೆ ಎಂದು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಗುರುರಾಜ ಕುಲಕರ್ಣಿ ಹೇಳಿದರು.




ಗದಗ ಜಿಲ್ಲಾ ಕಚೇರಿ ಸಭಾಂಗಣದಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಹಮ್ಮಿಕೊಂಡಿದ್ದ ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಯೋಜನೆಯಡಿ ಸರ್ಕಾರ ಶೇ.50ರಷ್ಟು ಸಹಾಯಧನ ನೀಡುತ್ತಿದ್ದು, ನಿರುದ್ಯೋಗಿ ಯುವಕರು ಸ್ವಂತ ವಾಹನ ಖರೀದಿಸಿ ಉದ್ಯೋಗ ಆರಂಭಿಸಲು ಇದು ಉತ್ತಮ ಅವಕಾಶವಾಗಿದೆ" ಎಂದರು.

ಎಂ–ಪ್ಯಾನಲ್ ಆಗಿರುವ ವಾಹನ ತಯಾರಿಕಾ ಸಂಸ್ಥೆಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡು ಫಲಾನುಭವಿಗಳು ತಮ್ಮ ಅಗತ್ಯಕ್ಕೆ ತಕ್ಕ ಕಾರುಗಳನ್ನು ಖರೀದಿಸಬಹುದು. ವಾಹನವನ್ನು ಕೇವಲ ಖರೀದಿಸುವುದಲ್ಲ, ಅದನ್ನು ಆದಾಯದ ಮೂಲವನ್ನಾಗಿ ಮಾಡಿಕೊಂಡು ಆರ್ಥಿಕ ಪ್ರಗತಿ ಸಾಧಿಸಬೇಕು ಎಂದು ಸಲಹೆ ನೀಡಿದರು.

"ಕ್ಯಾಬ್ ಸೇವೆ, ಪ್ರವಾಸೋದ್ಯಮ ಹಾಗೂ ವಾಹನ ಚಾಲನಾ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮೂಲಕ ಯೋಜನೆ ಯುವಕರ ಬದುಕಿಗೆ ಹೊಸ ದಾರಿ ತೆರೆದಿದೆ" ಎಂದು ಹೇಳಿದರು.

ಸಭೆಯಲ್ಲಿ ಯೋಜನೆಯ ನಿಯಮಗಳು, ಬ್ಯಾಂಕ್ ಸಾಲ ಪ್ರಕ್ರಿಯೆ, ದಾಖಲೆಗಳ ಪರಿಶೀಲನೆ, ವಾಹನ ಆಯ್ಕೆ ಹಾಗೂ ಅನುದಾನ ಸೌಲಭ್ಯಗಳ ಕುರಿತು ಅಧಿಕಾರಿಗಳು ವಿವರವಾದ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ನಿಗಮದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳು ಉಪಸ್ಥಿತರಿದ್ದರು.

# ಬೀದಿ ನಾಯಿಯ ಕಾಟಕ್ಕೆ ಬ್ರೇಕ್



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಒಂದು ತಿಂಗಳಿಗೂ ಹೆಚ್ಚು ಕಾಲದಿಂದ ಪಟ್ಟಣದ ಶ್ರೀ ಅನ್ನದಾನೇಶ್ವರ ಕಾಲೊನಿಯ ನಿವಾಸಿಗಳಿಗೆ ತಲೆನೋವಾಗಿದ್ದ ಬೀದಿ ನಾಯಿ ಹಾಗೂ ಅದರ ಮರಿಯನ್ನು ಪಟ್ಟಣ ಪಂಚಾಯಿತಿ ಸಿಬ್ಬಂದಿ ಸೆರೆ ಹಿಡಿದು ಕೊಂಡೊಯ್ದ ಹಿನ್ನೆಲೆಯಲ್ಲಿ ನಿವಾಸಿಗಳು ನಿಟ್ಟುಸಿರು ಬಿಟ್ಟಿದ್ದಾರೆ.

ಶ್ರೀ ಅನ್ನದಾನೇಶ್ವರ ಕಾಲೊನಿಯ ಎರಡನೇ ಅಡ್ಡರಸ್ತೆಯಲ್ಲಿ ಅಲೆದಾಡುತ್ತಿದ್ದ ಬೀದಿ ನಾಯಿ ಮತ್ತು ಅದರ ಮರಿ ಹಗಲು–ರಾತ್ರಿ ಎನ್ನದೆ ಬೊಗಳುತ್ತಿದ್ದು, ಸ್ಥಳೀಯರ ನಿದ್ದೆ ಮತ್ತು ನೆಮ್ಮದಿಯನ್ನು ಕದಡಿತ್ತು. ರಾತ್ರಿ ಪೂರ್ತಿ ಎಚ್ಚರದಿಂದ ಕಾಲ ಕಳೆಯಬೇಕಾದ ಪರಿಸ್ಥಿತಿ ನಿವಾಸಿಗಳದ್ದಾಗಿತ್ತು. ಇದರಿಂದ ನಿವಾಸಿಗಳ ಆರೋಗ್ಯದ ಮೇಲೂ ದುಷ್ಪರಿಣಾಮ ಉಂಟಾಗಿತ್ತು ಎಂದು ಸ್ಥಳೀಯರು ಅಳಲು ತೋಡಿಕೊಂಡಿದ್ದರು.

ಇದಲ್ಲದೆ ಮರಿ ನಾಯಿ ಮನೆಗಳಿಗೆ ನುಗ್ಗಿ ಎಲ್ಲೆಂದರಲ್ಲಿ ಹೊಲಸು ಮಾಡುತ್ತಿದ್ದು, ಅದನ್ನು ಸ್ವಚ್ಛಗೊಳಿಸುವುದೇ ನಿವಾಸಿಗಳಿಗೆ ದೊಡ್ಡ ತೊಂದರೆಯಾಗಿತ್ತು.

ಈ ಕುರಿತು ನಿವಾಸಿಗಳು ಕಳೆದ ತಿಂಗಳೇ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮತ್ತು ಸಿಬ್ಬಂದಿಯವರ ಗಮನಕ್ಕೆ ತಂದಿದ್ದು, ಬುಧವಾರ ಪಪಂ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಬೀದಿ ನಾಯಿ ಮತ್ತು ಅದರ ಮರಿಯನ್ನು ಸೆರೆ ಹಿಡಿದರು.

ಈ ಹಿನ್ನೆಲೆಯಲ್ಲಿ ನಿವಾಸಿಗಳು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸಿದ್ದಾರೆ.

**ಕುಡಿಯುವ ನೀರಿನ ಸಮಸ್ಯೆ ಖಂಡಿಸಿ ಲಕ್ಷ್ಮೇಶ್ವರ ಪುರಸಭೆಗೆ ಕರವೇ ಮುತ್ತಿಗೆ**

# ನೀರು ಇಲ್ಲ, ಬಿಲ್ ಯಾಕೆ?



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಹಲವು ತಿಂಗಳಿಂದ ಸಮರ್ಪಕ ಕುಡಿಯುವ ನೀರು ಸರಬರಾಜಾಗದಿರುವುದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಬುಧವಾರ ಪುರಸಭೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ, "ಪಟ್ಟಣದ ಹಲವು ವಾರ್ಡ್‌ಗಳಿಗೆ ತಿಂಗಳಿನಿಂದ ನೀರು ಸರಬರಾಜಾಗಿಲ್ಲ. ಅಧಿಕಾರಿಗಳನ್ನು ಪ್ರಶ್ನಿಸಿದರೆ ಬೇಜವಾಬ್ದಾರಿಯುತ ಉತ್ತರ ನೀಡುತ್ತಿದ್ದಾರೆ. ನೀರು ಕೊಡಲು ಆಗದಿದ್ದರೆ ಜನರಿಂದ ಬಿಲ್ ಏಕೆ ವಸೂಲಿ ಮಾಡುತ್ತಾರೆ?" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ನೀರು ಸರಬರಾಜು ಮಾಡದಿದ್ದರೆ ಜನರು ನೀರಿನ ಬಿಲ್ ಕಟ್ಟುವುದಿಲ್ಲ. ಮೊದಲು ನೀರು ಬಿಡಿ, ನಂತರ ಬಿಲ್ ಕೇಳಿ."

**– ಬಸವರಾಜ ಹೊಗೆಸೊಪ್ಪಿನ,** ಕರವೇ ಜಿಲ್ಲಾ ಪ್ರಕಾರ್ಯದರ್ಶಿ

ಕುಡಿಯುವ ನೀರು ಹಾಗೂ ಬೋರ್‌ವೆಲ್ ನೀರಿನ ಕೊರತೆಯಿಂದ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ಕೂಡಲೇ ಸಮಸ್ಯೆ ಬಗೆಹರಿಸದಿದ್ದರೆ ಪುರಸಭೆ ಎದುರು ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಸುಮಾರು ಒಂದು ಗಂಟೆ ಕಾಲ ನಡೆದ ಪ್ರತಿಭಟನೆಯ ಬಳಿಕ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾಕಾರರ ಅಹವಾಲು ಆಲಿಸಿದರು. ನೀರಿನ ಸಮಸ್ಯೆ ಇರುವ ವಾರ್ಡ್‌ಗಳಿಗೆ ತಾತ್ಕಾಲಿಕವಾಗಿ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುವುದು ಹಾಗೂ ಎರಡು ದಿನಗಳಲ್ಲಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂತೆಗೆದುಕೊಳ್ಳಲಾಯಿತು.

ಪ್ರತಿಭಟನೆಯಲ್ಲಿ ತಾಲೂಕು ಅಧ್ಯಕ್ಷ ಲೋಕೇಶ ಸುತಾರ, ಗೌರವಾಧ್ಯಕ್ಷ ಪ್ರವೀಣ ಗಾಣಗೇರ, ಬಸವರಾಜ ಮಲ್ಲೂರ, ಅರುಣ ಮೆಕ್ಕಿ, ಗಂಗಾಧರ ಕರ್ಜಕಣ್ಣವರ, ಗಂಗಾಧರ ಕೊಂಚಿಗೇರಿಮಠ, ಮಂಜುನಾಥ ಕೊಡಳ್ಳಿ, ಫಕ್ಕೀರೇಶ ಅಣ್ಣಿಗೇರಿ, ಚನ್ನಬಸಯ್ಯ ಗಡ್ಡದೇವರಮಠ, ಶಂಕರಗೌಡ ಪಾಟೀಲ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಸಾವಿತ್ರಿ ಅತ್ತಿಗೇರಿ, ಹುಲಿಗೆಮ್ಮ ಮೇವುಂಡಿ, ಜಯಮ್ಮ ತುಪ್ಪದ, ಲಕ್ಷ್ಮಕ್ಕ ಪಶುಪತಿಹಾಳ, ರೇಷ್ಮಾ ಜಾದವ, ಸಾವಕ್ಕ ಮಳ್ಳೊಳ್ಳಿ, ಕೆಂಚಮ್ಮ ಶೇರಸೂರಿ, ರತ್ನವ್ವ ವಗ್ಗರ, ರಜಿಯಾ ಮಕಾನದಾರ, ರೇಣಕ್ಕ ಮಲ್ಲೂರ, ಲಕ್ಷ್ಮವ್ವ ಗದ್ದಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

**ಧಾರಾಕಾರ ಮಳೆಯಿಂದ ರೈತರ ಮೊಗದಲ್ಲಿ ಮಂದಹಾಸ– ಗಡ್ಡಿ ಹಳ್ಳ ಉಕ್ಕಿ ಹರಿದು ಸಂಭ್ರಮ**

# ಡಿ.ಕೆ. ಶಿವಕುಮಾರ ಸಿಎಂ: ಗದಗದಲ್ಲಿ ಸಂಭ್ರಮಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಡಿ.ಕೆ. ಶಿವಕುಮಾರ ಹಾಗೂ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಡಾ. ಜಿ. ಪರಮೇಶ್ವರ ಅವರಿಗೆ ಶುಭಾಶಯ ಕೋರಿ ಗದಗ ನಗರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಾಚರಣೆ ನಡೆಸಿದರು.

ನಗರಸಭೆ ಮುಂಭಾಗದಲ್ಲಿರುವ ವಾಯ್.ಎಚ್. ಪರಾಪೂರ ಫೈನಾನ್ಸ್ ಕಚೇರಿ ಎದುರು ಸಿಬ್ಬಂದಿ ಹಾಗೂ ಅಭಿಮಾನಿಗಳಿಂದ ಸಂಭ್ರಮಾಚರಣೆ ಆಯೋಜಿಸಲಾಗಿತ್ತು. ಈ ವೇಳೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ದಲಿತ ಸಮುದಾಯದ ಹಿರಿಯ ನಾಯಕ ಡಾ. ಜಿ. ಪರಮೇಶ್ವರ ಪರ ಜಯಘೋಷಣೆಗಳು ಮೊಳಗಿದವು.



ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಯುವ ಮುಖಂಡ ವಿನಾಯಕ ಪರಾಪೂರ, "ರಾಜ್ಯದ ಚುಕ್ಕಾಣಿಯನ್ನು ಡಿ.ಕೆ. ಶಿವಕುಮಾರ ಅವರು ಹಿಡಿದಿರುವುದು ಕಾಂಗ್ರೆಸ್ ಕಾರ್ಯಕರ್ತರಿಗೆ ಹೊಸ ಉತ್ಸಾಹ ತಂದಿದೆ. ಪಕ್ಷ ಸಂಕಷ್ಟದಲ್ಲಿದ್ದ ಪ್ರತಿಯೊಂದು ಸಂದರ್ಭದಲ್ಲೂ ಅವರು ನಿಷ್ಠೆಯಿಂದ ಪಕ್ಷದ ಪರ ನಿಂತಿದ್ದರು. ಅವರ ಪರಿಶ್ರಮ ಹಾಗೂ ಪಕ್ಷನಿಷ್ಠೆಗೆ ಹೈಕಮಾಂಡ್ ಸೂಕ್ತ ಗೌರವ ನೀಡಿದೆ" ಎಂದು ಹೇಳಿದರು.

"ಈ ಹಿಂದೆ ಸಿದ್ದರಾಮಯ್ಯ ಅವರು ಜನಪರ ಯೋಜನೆಗಳ ಮೂಲಕ ಜನಮನ ಗೆದ್ದಿದ್ದರು. ಇದೀಗ ಆ ಆಡಳಿತ ಪರಂಪರೆಯನ್ನು ಮುಂದುವರಿಸುವ ದೊಡ್ಡ ಜವಾಬ್ದಾರಿ ಡಿ.ಕೆ. ಶಿವಕುಮಾರ ಮೇಲಿದೆ. ಒಬ್ಬ ರೈತನ ಮಗ ರಾಜ್ಯದ ಮುಖ್ಯಮಂತ್ರಿ ಸ್ಥಾನಕ್ಕೇರಿರುವುದು ಹೆಮ್ಮೆಯ ಸಂಗತಿ. ಬಡವರ ಪರ ಇನ್ನಷ್ಟು ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತರಲಿದ್ದಾರೆ ಎಂಬ ವಿಶ್ವಾಸವಿದೆ" ಎಂದು ಅಭಿಪ್ರಾಯಪಟ್ಟರು.

ಡಿ.ಕೆ. ಶಿವಕುಮಾರ ಅವರು ಸಾಮಾನ್ಯ ಕಾರ್ಯಕರ್ತರಾಗಿ, ಕೆಪಿಸಿಸಿ ಅಧ್ಯಕ್ಷರಾಗಿ, ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಸುಮಾರು 45 ವರ್ಷಗಳ ರಾಜಕೀಯ ಅನುಭವ ಹೊಂದಿರುವ ಅವರು ರಾಜ್ಯವನ್ನು ಮತ್ತಷ್ಟು ಅಭಿವೃದ್ಧಿಯತ್ತ ಕೊಂಡೊಯ್ಯುವ ವಿಶ್ವಾಸವಿದೆ.

**– ಪೃಥ್ವಿ ಕೆ. ಪರಾಪೂರ,** ಕಾಂಗ್ರೆಸ್ ಯುವ ಮುಖಂಡ

ಪಂಚ ಗ್ಯಾರಂಟಿ ಯೋಜನೆಗಳು ದೇಶದ ಗಮನ ಸೆಳೆದಿದ್ದು, ರಾಜ್ಯದ ಲಕ್ಷಾಂತರ ಕುಟುಂಬಗಳಿಗೆ ನೆರವಾಗಿವೆ. ಮೊದಲು ಟೀಕಿಸಿದ್ದವರೇ ಈಗ ಬೇರೆ ರಾಜ್ಯಗಳಲ್ಲಿ ಇದೇ ಮಾದರಿಯ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದಾರೆ ಎಂದು ವಿರೋಧ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ವಿಶಾಲ ಗೋಶಲ್ಯನವರ, ಮಂಜುನಾಥ ಕೊರವರ, ಅರವಿಂದ ಗಾಗಡೆ, ಅಜಯ ಗೌಡರ, ಶ್ರೀನಿವಾಸ್ ಮುದರೆಡ್ಡಿ, ಸಿದ್ದಪ್ಪ ಗೋಶಲ್ಯನವರ, ಬಸಣ್ಣ ಹಾತಲಗೇರಿ, ಕೃಷ್ಣ ಹಡಪದ, ಬಸವರಾಜ, ಪವನ, ಸಿದ್ದಣ್ಣ ಗೋಶಲ್ಯನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.


**ಧಾರಾಕಾರ ಮಳೆಯಿಂದ ರೈತರ ಮೊಗದಲ್ಲಿ ಮಂದಹಾಸ– ಗಡ್ಡಿ ಹಳ್ಳ ಉಕ್ಕಿ ಹರಿದು ಸಂಭ್ರಮ**

# ಹೆಸರಿಗೆ ಜೀವ ತುಂಬಿದ ರೋಹಿಣಿ ಮಳೆ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ರೋಹಿಣಿ ಮಳೆ ಈಗಾಗಲೇ ಬಿತ್ತನೆಯಾಗಿದ್ದ ಹೆಸರು ಹಾಗೂ ಅಲಸಂದೆ ಬೆಳೆಗೆ ಹೊಸ ಜೀವ ತುಂಬಿದ್ದು, ಮಳೆಯ ನಿರೀಕ್ಷೆಯಲ್ಲಿದ್ದ ರೈತರ ಮುಖದಲ್ಲಿ ಸಂತಸ ಮೂಡಿಸಿದೆ.

ರೋಹಿಣಿ ಮಳೆ ಆರಂಭವಾದ ಬೆನ್ನಲ್ಲೇ ಅಲ್ಪ ತೇವಾಂಶದಲ್ಲೇ ರೈತರು ಹೆಸರು ಮತ್ತು ಅಲಸಂದೆ ಬಿತ್ತನೆ ಮಾಡಿದ್ದರು. ಆದರೆ ಕೆಲ ದಿನ ಮಳೆ ಕೈಕೊಟ್ಟ ಪರಿಣಾಮ ಬೆಳೆ ಒಣಗುವ ಆತಂಕ ರೈತರನ್ನು ಕಾಡುತ್ತಿತ್ತು. ಇದೀಗ ಮಂಗಳವಾರ ಸಂಜೆ ಹಾಗೂ ಬುಧವಾರ ಬೆಳಿಗ್ಗೆ ಸುರಿದ ಧಾರಾಕಾರ ಮಳೆ ರೈತಾಪಿ ವರ್ಗಕ್ಕೆ ಹೊಸ ಭರವಸೆ ನೀಡಿದೆ.



ನರೇಗಲ್ಲ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉತ್ತಮ ಮಳೆಯಾಗಿದ್ದು, ತೊಂಡಿಹಾಳ ಸೇರಿದಂತೆ ವಿವಿಧ ಭಾಗಗಳಲ್ಲಿ ಮಳೆಯ ಅಬ್ಬರ ಕಂಡು ಬಂದಿದೆ. ಮಳೆಯಿಂದ ನರೇಗಲ್ಲದ ಗಡ್ಡಿ ಹಳ್ಳ ತುಂಬಿ ರಭಸದಿಂದ ಹರಿಯುತ್ತಿದ್ದು, ಹಳ್ಳದ ಈ ದೃಶ್ಯವನ್ನು ಕಂಡು ಜನತೆ ಹರ್ಷ ವ್ಯಕ್ತಪಡಿಸಿದರು.

"ಇತ್ತೀಚಿನ ವರ್ಷಗಳಲ್ಲಿ ಗಡ್ಡಿ ಹಳ್ಳ ಇಷ್ಟು ರಭಸವಾಗಿ ಹರಿದದ್ದು ನೋಡಿಲ್ಲ" ಎಂದು ರೈತರು ಸಂತಸ ಹಂಚಿಕೊಂಡರು.

**ಜೋಡು ರಸ್ತೆಯಲ್ಲಿ ನೀರು ನಿಂತು ವಾಹನ ಸವಾರರಿಗೆ ತೊಂದರೆ**

ಇದೇ ವೇಳೆ ಪಟ್ಟಣದ ಕೃಷಿ ಕೇಂದ್ರದ ಬಳಿಯ ಜೋಡು ರಸ್ತೆಯಲ್ಲಿ ಮಳೆ ನೀರು ಜಮಾವಣೆಗೊಂಡು ವಾಹನ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಯಿತು. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಯಿತು.

ಜೋಡು ರಸ್ತೆಯ ಆರಂಭದಲ್ಲಿರುವ ದೊಡ್ಡ ತಗ್ಗು ಮಳೆ ನೀರಿನಿಂದ ಮುಚ್ಚಿಹೋಗಿರುವುದರಿಂದ ಅಪಾಯದ ಸಾಧ್ಯತೆ ಹೆಚ್ಚಾಗಿದೆ. ಸಂಬಂಧಪಟ್ಟ ಇಲಾಖೆ ಕೂಡಲೇ ನೀರು ಸರಾಗವಾಗಿ ಹರಿದುಹೋಗುವ ವ್ಯವಸ್ಥೆ ಮಾಡಬೇಕು ಹಾಗೂ ತಗ್ಗನ್ನು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka